ಸಂಪುಟ : 10 ಸಂಚಿಕೆ: 132 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 132 Pages : 4+2 Price : 3.00 Friday June 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಆದರ್ಶ ವಿದ್ಯಾಲಯದಿಂದ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2025–26ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯ ಕೊರ್ಲಹಳ್ಳಿ ತಾ; ಮುಂಡರಗಿ ಶಾಲೆಯಲ್ಲಿ ತರಗತಿ 7ನೇ–01, 9ನೇ–4 ಹಾಗೂ ಆದರ್ಶ ವಿದ್ಯಾಲಯ ಇಟಗಿ ತಾ; ರೋಣ ಶಾಲೆಯಲ್ಲಿ ತರಗತಿ 7ನೇ–6, 8ನೇ–10, 9ನೇ–4ನೇ ಆದರ್ಶ ವಿದ್ಯಾಲಯಗಳಲ್ಲಿ ಖಾಲಿ ಇರುವ ಸೀಟುಗಳ ಪ್ರವೇಶ ಪ್ರಕ್ರಿಯೆ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಯಾ ಶಾಲೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿ: 25–06–2025 ರಿಂದ 8–7–2025 ರ ವರೆಗೆ ಸಲ್ಲಿಸಬಹುದಾಗಿದೆ.

ಪರೀಕ್ಷೆ ನಡೆಯುವ ದಿ: ಆಯಾ ಬ್ಲಾಕ್‌ಗಳಲ್ಲಿ ದಿ: 15–7–2025 , ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ಸಂಬಂದಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ ಸಲ್ಲಿಸುವುದು, ಮೀಸಲಾತಿ ಅನ್ವಯ ಖಾಲಿ ಸೀಟುಗಳನ್ನು ಆಯಾ ತರಗತಿಗಳಿಗೆ ಭರ್ತಿ ಮಾಡಿಕೊಂಡು ದಾಖಲಾತಿ ಪ್ರಕ್ರಿಯನ್ನು ದಿ: 30–7–2025 ರೊಳಗಾಗಿ ಪೂರ್ಣಗೊಳಿಸುವುದು ಮುಖ್ಯ ಶಿಕ್ಷಕರ ಜವಾಬ್ದಾರಿಯಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆದರ್ಶ ವಿದ್ಯಾಲಯದ ಶಾಲಾ ಮುಖ್ಯ ಶಿಕ್ಷಕರಿಗೆ ಸಂಪರ್ಕಿಸುವುದು. ಗದಗ ಡಯಟ್ ನೋಡಲ್ ಅಧಿಕಾರಿಗಳಾದ ಕೆ.ಪಿ ಸಾಲಿಮಠ, ಮೊಬೈಲ್ ನಂ. 8762487691 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ‘ವಿಶ್ವ ಮಾದಕ ವಸ್ತು ಬಳಕೆ ವಿರೋಧಿ ದಿನ’ ಕಾರ್ಯಕ್ರಮದಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

# ವಿದ್ಯಾರ್ಥಿಗಳು ಶಿಕ್ಷಣಕ್ಕೆ ಹೆಚ್ಚು ಗಮನ ನೀಡಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಾದಕ ದ್ರವ್ಯ ಹಾಗೂ ಮಾದಕ ವಸ್ತುಗಳ ಮಾರಾಟ ಮತ್ತು ಬಳಕೆ ಕಂಡುಬಂದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾದಕ ವಸ್ತು ಬಳಕೆ ಮತ್ತು ಅಕ್ರಮ ಸಾಗಾಟ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಲು ಮತ್ತು ಉತ್ತಮ ಸಮಾಜ ನಿರ್ಮಿಸಲು ವಿದ್ಯಾರ್ಥಿಗಳು ಶಿಕ್ಷಣದ ಕಡೆಗೆ ಹೆಚ್ಚು ಗಮನ ಕೊಡಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವ್ಯಸನಿಗಳಾಗಬಾರದು. ಮಾದಕ ವಸ್ತುಗಳು ಕುಟುಂಬದ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ ಅವುಗಳ ಬಗ್ಗೆ ಜಾಗೃತರಾಗಿರಬೇಕು. ಸ್ವಸ್ಥ ಸಮಾಜದಲ್ಲಿ ಆರೋಗ್ಯವಂತ ಜೀವನ ನಡೆಸಬೇಕು. ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಅಕ್ರಮ ಸಾಗಾಟವನ್ನು ತಡೆಗಟ್ಟುವಲ್ಲಿ ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು, ಪೋಷಕರ ಸಹಕಾರ ಅತ್ಯಗತ್ಯ ಎಂದು ಹೇಳಿದರು.

ಪ್ರತಿ ವರ್ಷ ಜೂನ್ 26ರಂದು ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನವನ್ನು ‘ವಿಶ್ವ ಮಾದಕ ವಸ್ತು ಬಳಕೆ ವಿರೋಧಿ ದಿನ’ ಎಂದು ಆಚರಿಸಲಾಗುತ್ತದೆ. ಮಾದಕ ವ್ಯಸನ ಮುಕ್ತ ಜಗತ್ತನ್ನು ನಿರ್ಮಿಸಲು ಕ್ರಮ ಮತ್ತು ಸಹಕಾರವನ್ನು ಬಲಪಡಿಸುವುದು ಇದರ ಮುಖ್ಯ ಉದ್ದೇಶ. ಸಮಾಜದ ಜವಾಬ್ದಾರಿಯುತ ಪ್ರಜೆಗಳಾಗಿ, ಮಾದಕ ವಸ್ತುಗಳ ಮಾರಾಟ ಮತ್ತು ಅಕ್ರಮ ಸಾಗಾಟದಂತಹ ಪ್ರಕರಣಗಳು ಕಂಡುಬಂದರೆ ತಕ್ಷಣವೇ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ಎಸ್‌ಪಿ ಬಿ.ಎಸ್. ನೇಮಗೌಡ ತಿಳಿಸಿದರು.

ಇದೇ ಸಂದರ್ಭದಲ್ಲಿ ನೆರೆದಿದ್ದ ವಿದ್ಯಾರ್ಥಿಗಳು, ಸಾರ್ವಜನಿಕರು ‘ಮಾದಕ ವಸ್ತುಗಳನ್ನು ಬಳಸುವುದಿಲ್ಲ’ ಎನ್ನುವ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಡಾ. ಅರವಿಂದ ಉಪನ್ಯಾಸ ನೀಡಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಬಕಾರಿ ಡಿಸಿ ಲಕ್ಷ್ಮೀ, ಸಿಪಿಐಗಳಾದ ಧೀರಜ ಶಿಂಧೆ, ಶಿವಯೋಗಿ ಕಳಸದ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ತರುವಾಯ ನಗರದ ಪ್ರಮುಖ ರಸ್ತೆಗಳಲ್ಲಿ ವಿದ್ಯಾರ್ಥಿಗಳಿಂದ ಮಾದಕ ವ್ಯಸನ ವಿರೋಧಿ ಜಾಗೃತಿ ಜಾಥಾ ನೆರವೇರಿತು.

> ಇತ್ತೀಚಿನ ವರ್ಷಗಳಲ್ಲಿ ವಿಶ್ವದಾದ್ಯಂತ ಮಕ್ಕಳು ಮತ್ತು ಯುವಕರು ಮಾದಕ ವಸ್ತುಗಳ ದುಶ್ಚಟಗಳಿಗೆ ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನು ಬಾಹಿರ ಎಂದು ಗೊತ್ತಿದ್ದರೂ ಇದರ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಡ್ರಗ್ ಮಾಫಿಯಾವನ್ನು ಹತೋಟಿಗೆ ತರಲು ವಿಶ್ವದೆಲ್ಲೆಡೆ ಕಾನೂನು ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬೇರುಸಹಿತ ಕಿತ್ತುಹಾಕಲು ಸಾರ್ವಜನಿಕರ ಸಹಕಾರ ಕೂಡ ಅಷ್ಟೇ ಪ್ರಮುಖವಾಗಿದೆ.
>
> **– ಬಿ.ಎಸ್. ನೇಮಗೌಡ.**
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.



## ಜು.3ರಂದು ಸರಕಾರಿ ನೌಕರರ ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ 2024–2029 ನೇ ಸಾಲಿನ ಉಳಿದ ಅವಧಿಯ ಜಿಲ್ಲಾಧ್ಯಕ್ಷ ಸ್ಥಾನದ ಚುನಾವಣೆಯು ಜರುಗಲಿದ್ದು ಚುನಾವಣೆಯ ವೇಳಾಪಟ್ಟಿ ಈ ಕೆಳಕಂಡಂತಿದೆ.

ನಾಮಪತ್ರಗಳ ವಿತರಣೆಯು ಜುಲೈ 3 ರಂದು ( ಗುರುವಾರ) ಬೆ 10 ರಿಂದ 11.30 ಗಂಟೆಯವರೆಗೆ ಇದ್ದು, ನಾಮಪತ್ರಗಳನ್ನು (ಗುರುವಾರ) ಅದೇ ದಿನ ಬೆಳಿಗ್ಗೆ 12.30 ಗಂಟೆಯವರಗೆ ಸಲ್ಲಿಸಬಹುದಾಗಿದೆ. ಮಧ್ಯಾಹ್ನ 1 ಗಂಟೆಯವರೆಗೆ ಅರ್ಹ ಅಭ್ಯರ್ಥಿಗಳ ಹೆಸರು ಪ್ರಕಟಣೆ, ಮಧ್ಯಾಹ್ನ 12.45 ಗಂಟೆಯವರೆಗೆ ನಾಮಪತ್ರಗಳನ್ನು ಪರಿಶೀಲಿಸಲಾಗುವುದು. ಮಧ್ಯಾಹ್ನ 2 ಗಂಟೆಯವರೆಗೆ ನಾಮಪತ್ರಗಳನ್ನು ವಾಪಸ್ ಪಡೆಯಬಹುದಾಗಿದೆ. ಮಧ್ಯಾಹ್ನ 3 ರಿಂದ ಸಂಜೆ 4.30 ರವರೆಗೆ ಚುನಾವಣೆಯನ್ನು ನಡೆಸಲಾಗುವುದು. ಸಂಜೆ 4.45 ಗಂಟೆಗೆ ಮತಗಳ ಎಣಿಕೆ ನಡೆಯಲಿದೆ.

ಮತದಾರರ ಪಟ್ಟಿಯನ್ನು ಜುಲೈ 3 ರಂದು ಬೆಳಿಗ್ಗೆ 10 ಗಂಟೆಯಿಂದ ಕ.ರಾ.ಸ.ನೌ.ಸಂಘ ಗದಗ ಇಲ್ಲಿ ಚುನಾವಣಾಧಿಕಾರಿಗಳಿಂದ ಪಡೆಯಬಹುದಾಗಿದೆ. ದೃಢೀಕೃತ ಮತದಾರರ ಪಟ್ಟಿ ಪ್ರತಿಯನ್ನು ನಿಗದಿತ ಶುಲ್ಕ ರೂ.100/ ಗಳನ್ನು ಪಾವತಿಸಿ ಪಡೆಯುವುದು. ಮತದಾನವು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಚೇರಿ ಗದಗನಲ್ಲಿ ನಡೆಯಲಿದೆ. ಮತದಾರರು ಇಲಾಖೆಯು ನೀಡಿರುವ ಗುರುತಿನ ಚೀಟಿ/ 2024–2029 ನೇ ಅವಧಿಗೆ ಚುನಾಯಿತರಾದ ಬಗ್ಗೆ ಚುನಾವಣಾಧಿಕಾರಿಗಳು ನೀಡಿರುವ ಪ್ರಮಾಣ ಪತ್ರವನ್ನು ಮತ ಚಲಾವಣೆ ಸಮಯದಲ್ಲಿ ಕಡ್ಡಾಯವಾಗಿ ಹಾಜರಪಡಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷರು ಹಾಗೂ ಚುನಾವಣಾಧಿಕಾರಿ ಎಸ್.ಬಸವರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಜಕೀಯ ದ್ವೇಷದ ಕಾರಣಕ್ಕೆ ಬಿಜೆಪಿ ಸದಸ್ಯರ ವಾರ್ಡ್‌ಗಳಿಗೆ ಅನುದಾನದಲ್ಲಿ ತಾರತಮ್ಯ

# ಸಾರ್ವಜನಿಕರೊಡಗೂಡಿ ಹೋರಾಟ ನಡೆಸುತ್ತೇವೆ



> ಈ ಕ್ರಮದ ವಿರುದ್ಧ 7 ಜನ ಬಿಜೆಪಿ ಸದಸ್ಯರು ವಿಶೇಷ ಸಾಮಾನ್ಯ ಸಭೆಯಿಂದ ಸಭಾತ್ಯಾಗ ಮಾಡಿದ್ದೇವೆ. ಈ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರುತ್ತೇವೆ. ಪಕ್ಷದ ಹಿರಿಯ ನಾಯಕರೊಂದಿಗೆ ಚರ್ಚಿಸುತ್ತೇವೆ. ಅನುದಾನದಿಂದ ವಂಚಿತವಾದ ನಮ್ಮ ವಾರ್ಡ್‌ಗಳ ಜನರೊಂದಿಗೆ ಹೋರಾಟ ಕೈಗೊಳ್ಳುತ್ತೇವೆ ಎಂದು ಬಿಜೆಪಿ ಸದಸ್ಯರು ತಿಳಿಸಿದರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಅಭಿವೃದ್ಧಿಗೆ ಸರಕಾರದಿಂದ ಬಂದ ಅನುದಾನ ಹಂಚಿಕೆಯಲ್ಲಿ ಆಡಳಿತ ಪಕ್ಷದ ಕಾಂಗ್ರೆಸ್‌ನವರು ಬಿಜೆಪಿ ಸದಸ್ಯರ ವಾರ್ಡ್‌ಗಳಿಗೆ ಅನುದಾನ ನೀಡದೇ ತಾರತಮ್ಯ ಮಾಡುತ್ತಿದ್ದಾರೆ. ರಾಜಕೀಯ ದ್ವೇಷದ ಈ ಕಾರಣದಿಂದ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಹಿನ್ನಡೆಯಾಗಲಿದೆ. ಈ ಬಗ್ಗೆ ಆಡಳಿತ ಪಕ್ಷದ ಕ್ರಮದ ವಿರುದ್ಧ ಸಾರ್ವಜನಿಕರೊಡಗೂಡಿ ಹೋರಾಟ ಕೈಗೊಳ್ಳಬೇಕಾಗುತ್ತದೆ ಎಂದು ವಿರೋಧ ಪಕ್ಷದ ಸದಸ್ಯರಾದ ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ ಮತ್ತಿತರರು ಆಕ್ರೋಶ ವ್ಯಕ್ತಪಡಿಸಿದರು. ಗುರುವಾರ ನಡೆದ ಸಭೆಯಲ್ಲಿ ಆಡಳಿತ ಪಕ್ಷದ ತಾರತಮ್ಯದ ಕ್ರಮವನ್ನು ಪ್ರಶ್ನಿಸಿ ಸಭಾತ್ಯಾಗ ಮಾಡಿದ ಸದಸ್ಯರು ಸುದ್ದಿಗಾರರೊಂದಿಗೆ ಮಾತನಾಡಿ, ಪುರಸಭೆಗೆ ಬಂದ 1.93 ಕೋಟಿ ರೂ ಅನುದಾನವನ್ನು ಆಡಳಿತ ಪಕ್ಷದ ಅಧ್ಯಕ್ಷೆ ಹಾಗೂ ಸದಸ್ಯರು ತಮ್ಮ ವಾರ್ಡ್‌ಗಳಿಗೆ ಮಾತ್ರ ಹಂಚಿಕೊಂಡಿದ್ದಾರೆ. ಉದ್ದೇಶಪೂರ್ವಕವಾಗಿಯೇ ಬಿಜೆಪಿಯ ಸದಸ್ಯರ ವಾರ್ಡ್‌ಗಳನ್ನ ಕಡೆಗಣಿಸಿದ್ದಾರೆ ಎಂದು ಆರೋಪಿಸಿದರು. ಈ ವಿಷಯವಾಗಿ ಅಧ್ಯಕ್ಷರನ್ನು ಕೇಳಿದರೆ, ನೀವು ಕೇಳಿಲ್ಲವಾದ್ದರಿಂದ ನಾವು ಕೊಟ್ಟಿಲ್ಲ ಎಂಬ ಹಾರಿಕೆಯ ಉತ್ತರ ನೀಡುತ್ತಾರೆ. ಅನುದಾನ ಎಲ್ಲ ವಾರ್ಡ್‌ಗಳಿಗೂ ಸಮನಾಗಿ ಹಂಚುವ ಕಾರ್ಯ ಮಾಡದೇ ತಮ್ಮ ಮನೆಯಿಂದ ಅನುದಾನ ನೀಡಿದಂತೆ ಮಾಡಿದ್ದಾರೆ. ಕ್ರಿಯಾಯೋಜನೆಯನ್ನು ಮೊದಲೇ ನಿರ್ಧರಿಸಿ ಬಿಜೆಪಿ ಪಕ್ಷದವರ ಅನುಮೋದನೆಗಷ್ಟೇ ಸಭೆ ಕರೆದಿದ್ದಾರೆ. ಈ ಹಿಂದೆ ಬಿಜೆಪಿ ಆಡಳಿತಾವಧಿಯಲ್ಲಿ ಪಟ್ಟಣದ ಅಭಿವೃದ್ಧಿ ವಿಷಯದಲ್ಲಿ ರಾಜಕೀಯ ದ್ವೇಷ, ತಾರತಮ್ಯ ಮಾಡಿರಲಿಲ್ಲ ಎಂದು ಹೇಳಿದರು.

ಈ ವೇಳೆ ಸದಸ್ಯರಾದ ಮಹಾದೇವಪ್ಪ ಅಣ್ಣಿಗೇರಿ, ವಾಣಿ ಹತ್ತಿ, ಮಂಜುಳಾ ಗುಂಜಳ, ಪೂಜಾ ಕರಾಟೆ, ಶೋಭಾ ಮೆಣಸಿನಕಾಯಿ ಇದ್ದರು.

### ತುರ್ತು ಪರಿಸ್ಥಿತಿಯ ಅಣುಕು ಪ್ರದರ್ಶನ ಕಾರ್ಯಕ್ರಮದಲ್ಲಿ ಶಾಸಕ ಸಿ.ಸಿ. ಪಾಟೀಲ ಕಿಡಿ

# ಇಂದಿರಾ ಗಾಂಧಿಯಿಂದ ಸಂವಿಧಾನದ ಕಗ್ಗೊಲೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿರಾ ಗಾಂಧಿ ಲೋಕಸಭಾ ಚುನಾವಣೆಯಲ್ಲಿ ಹಣ ಹಾಗೂ ಪ್ರಭಾವದ ಮೇಲೆ ಗೆದ್ದಿದ್ದಾರೆ ಎಂದು ಅಲಹಾಬಾದ್ ಹೈಕೋರ್ಟ್ ತೀರ್ಪು ನೀಡಿ, ಸಂಸದ ಸ್ಥಾನದಿಂದ ಅವರನ್ನು ವಜಾಗೊಳಿಸಿತ್ತು. ಇದರಿಂದ ಕೆರಳಿದ ಇಂದಿರಾ 38ನೇ ವಿಧಿ ತಿದ್ದುಪಡಿ ತಂದು ದೇಶಕ್ಕೆ ತುರ್ತು ಪರಿಸ್ಥಿತಿ ಹೇರಿ ಸಂವಿಧಾನವನ್ನು ಕಗ್ಗೊಲೆ ಮಾಡಿದರು ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಗುರುವಾರ ಕೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತುರ್ತು ಪರಿಸ್ಥಿತಿಯ ಅಣುಕು ಪ್ರದರ್ಶನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತುರ್ತು ಪರಿಸ್ಥಿತಿ ಘೋಷಣೆ ಮಾಡಿ, ಜನರ ಸ್ವಾತಂತ್ರ್ಯ ಕಸಿದುಕೊಂಡರು. ಸಂಜಯ್ ಗಾಂಧಿ ಯಾವುದೇ ಸಂವಿಧಾನಾತ್ಮಕ ಹುದ್ದೆಯಲ್ಲಿ ಇರದಿದ್ದರೂ ಸಾರ್ವಜನಿಕರ ಮೇಲೆ ದರ್ಪ, ದಬ್ಬಾಳಿಕೆಯನ್ನು ಮಾಡುತ್ತಿದ್ದರು. ರಾಷ್ಟ್ರದ ವ್ಯವಸ್ಥೆಯನ್ನು ಒಂದು ಕುಟುಂಬದ ಕೈಯಲ್ಲಿ ಇಡುವ ಹುನ್ನಾರವನ್ನು ಅಂದಿನ ಪ್ರಧಾನಿ ಇಂದಿರಾ ಗಾಂಧಿ ಮಾಡಿದ್ದರು ಎಂದು ಕಿಡಿಕಾರಿದರು.

ಇವತ್ತು ಇಂದಿರಾ ಗಾಂಧಿ ಮಗಳು, ಮೊಮ್ಮಕ್ಕಳು ಸಂವಿಧಾನದ ಪುಸ್ತಕ ಕೈಯಲ್ಲಿ ಹಿಡಿದು ದೇಶದ ತುಂಬೆಲ್ಲ ಓಡಾಡುತ್ತಿದ್ದಾರೆ. ಇದು ಭೂತದ ಬಾಯಲ್ಲಿ ಭಗವದ್ಗಿತೆ ಎನ್ನುವಂತಿದೆ. ಕೇವಲ ರಾಜಕೀಯಕ್ಕಾಗಿ ಸಂವಿಧಾನದ ಪುಸ್ತಕ ಪ್ರದರ್ಶಿಸುತ್ತಾರೆಯೇ ಹೊರತು, ಅವರಿಗೆ ಸಂವಿಧಾನದ ಮೇಲೆ ಯಾವುದೇ ಗೌರವ ಇಲ್ಲ. ಸಂವಿಧಾನದಲ್ಲಿ ಎಷ್ಟು ಪುಟಗಳಿವೆ ಎಂಬುದೇ ಅವರಿಗೆ ಗೊತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷ ಅಮರೇಶ, ಮುಖಂಡರಾದ ಅಡವಿಸ್ವಾಮಿ ಹಿರೇಮಠ, ಪುನೀತ್ ದಂಡಿನ್, ಲಿಂಗರಾಜಗೌಡ ಪಾಟೀಲ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ನಗರಸಭೆ ಸದಸ್ಯೆ ಶ್ವೇತಾ ದಂಡಿನ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ ಮುಂತಾದವರಿದ್ದರು.

### ಶಿರಹಟ್ಟಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆ

# ಯೋಜನೆಗಳ ಸೌಲಭ್ಯ ಅರ್ಹರಿಗೆ ದೊರಕಲಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸರ್ಕಾರದ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಲ್ಲಿ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಿ ಕಾರ್ಯನಿರ್ವಹಿಸಬೇಕೆಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದರು.

ಶಿರಹಟ್ಟಿಯಲ್ಲಿ ಬುಧವಾರ ಜರುಗಿದ ಶಿರಹಟ್ಟಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದಂತೆ ಕಾಳಸಂತೆಯಲ್ಲಿ ಅಕ್ಕಿ ಅಕ್ರಮವಾಗಿ ಮಾರಾಟವಾಗುತ್ತಿರುವ ಕುರಿತು ದೂರು ಬರುತ್ತಿರುವ ಹಿನ್ನೆಲೆಯಲ್ಲಿ ಕಾಳ ಸಂತೆಯಲ್ಲಿ ಅಕ್ಕಿ ಮಾರಾಟವಾಗದಂತೆ ನೋಡಿಕೊಳ್ಳಬೇಕು. ಎಲ್ಲ ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಅಕ್ಕಿ ಜೋಳ ವಿತರಣೆಯಾಗಬೇಕು. ಯಾವ ಬಡ ಕುಟುಂಬವೂ ಗೃಹಲಕ್ಷ್ಮೀ ಯೋಜನೆಯಿಂದ ವಂಚಿತರಾಗಬಾರದು. ಈ ನಿಟ್ಟಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಸಮೀಕ್ಷೆ ನಡೆಸಬೇಕು ಎಂದರು.

ಬಸ್ ನಿಲ್ದಾಣದ ಆವರಣ, ಅಲ್ಲಿನ ಶೌಚಾಲಯ ಸ್ವಚ್ಛವಾಗಿರುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು. ಯುವನಿಧಿ, ಗೃಹಜ್ಯೋತಿ ಯೋಜನೆಗಳು ಅರ್ಹರೆಲ್ಲರಿಗೂ ತಲುಪುವಂತೆ ಅಧಿಕಾರಿಗಳು ಶ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಯಿತು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಸರ್ಕಾರದ ಮಹಾತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳು ದುರ್ಬಲರನ್ನು ಆರ್ಥಿಕ ಸಬಲರನ್ನಾಗಿ ಮಾಡುತ್ತಿವೆ. ಅರ್ಹರು ಯೋಜನೆಗಳಿಂದ ವಂಚಿತರಾಗದಂತೆ ಅಧಿಕಾರಿ ವಲಯ ಕ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಶಿವನಗೌಡ ಪಾಟೀಲ, ಮಲ್ಲಪ್ಪ ಹುಯಿಲಗೋಳ, ಬುಡೇಸಾಬ ಮಕಾಂದರ್, ದೇವಪ್ಪ ಲಮಾಣಿ, ವಿಶಾಲಾ ಹೊನ್ನಣ್ಣವರ, ಸುರೇಶ್ ಕೆಂಚರಡ್ಡಿರ, ಶಕುಂತಲಾ ವಿಭೂತಿಮಠ, ಹೊನ್ನೇಶ್ ಪೋಟಿ, ಮಹಾವೀರ್ ಮಂಟಗನ, ಅಂದನಗೌಡ ಪಾಟೀಲ್, ಸೋಮನಗೌಡ ಮರಿಗೌಡರ ಸೇರಿದಂತೆ ಸಂಬಂಧಿತ ಇಲಾಖೆಯ ಮುಖ್ಯಸ್ಥರು ಭಾಗವಹಿಸಿದ್ದರು.



> ಸಭೆಯ ಅಧ್ಯಕ್ಷತೆ ವಹಿಸಿದ್ದ ಶಿರಹಟ್ಟಿ ತಾಲೂಕ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳು ಅವುಗಳ ಸಮರ್ಪಕ ಅನುಷ್ಠಾನದ ಕುರಿತು ಪರಾಮರ್ಶೆ ನಡೆಸಬೇಕು.
>
> ಅರ್ಹರಿಗೆ ನಿಗದಿತ ಯೋಜನೆಗಳ ಸೌಲಭ್ಯ ನಿಗದಿತ ಅವಧಿಯೊಳಗೆ ಲಭ್ಯವಾಗುವಂತೆ ಕ್ರಮ ವಹಿಸಬೇಕೆಂದು ಸೂಚಿಸಿದರು.

## ಸಂಪಾದಕೀಯ

# ಮಾದಕ ದ್ರವ್ಯ ವಿರೋಧಿ ದಿನಾಚರಣೆ: ಸಮುದಾಯದ ಜವಾಬ್ದಾರಿ

ಪ್ರತಿ ವರ್ಷ ಜೂನ್ 26 ರಂದು ವಿಶ್ವದಾದ್ಯಂತ ಮಾದಕ ದ್ರವ್ಯ ಸೇವನೆ ಮತ್ತು ಕಳ್ಳಸಾಗಣೆ ವಿರೋಧಿ ಅಂತರರಾಷ್ಟ್ರೀಯ ದಿನವನ್ನು ಆಚರಿಸಲಾಗುತ್ತದೆ. ಈ ದಿನವು ಕೇವಲ ಒಂದು ಆಚರಣೆಯಲ್ಲ, ಬದಲಿಗೆ ಸಮುದಾಯಗಳನ್ನು ಒಗ್ಗೂಡಿಸಿ, ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅವುಗಳ ಸೇವನೆಯನ್ನು ತಡೆಯಲು ಸಾಮೂಹಿಕ ಪ್ರಯತ್ನಗಳನ್ನು ಉತ್ತೇಜಿಸಲು ಒಂದು ಪ್ರಮುಖ ಅವಕಾಶವಾಗಿದೆ.

ಮಾದಕ ವ್ಯಸನವು ಕೇವಲ ವೈಯಕ್ತಿಕ ಸಮಸ್ಯೆಯಾಗಿ ಉಳಿದಿಲ್ಲ, ಬದಲಿಗೆ ಸಮಾಜದ ಆರ್ಥಿಕ, ಸಾಮಾಜಿಕ ಮತ್ತು ಆರೋಗ್ಯ ವ್ಯವಸ್ಥೆಗಳ ಮೇಲೆ ಗಂಭೀರ ಪರಿಣಾಮ ಬೀರುವ ಒಂದು ಜಾಗತಿಕ ಪಿಡುಗಾಗಿ ಮಾರ್ಪಟ್ಟಿದೆ.

ಯುವಜನರು ಈ ಪಿಡುಗಿಗೆ ಸುಲಭವಾಗಿ ಬಲಿಯಾಗುತ್ತಿರುವುದು ಕಳವಳಕಾರಿ ಸಂಗತಿ.

ಕುತೂಹಲ, ಒತ್ತಡ, ಖಿನ್ನತೆ, ಅಥವಾ ಸಹವರ್ತಿಗಳ ಪ್ರಭಾವದಂತಹ ಅನೇಕ ಕಾರಣಗಳು ಯುವಕರನ್ನು ಮಾದಕ ದ್ರವ್ಯಗಳ ಕಡೆಗೆ ತಳ್ಳುತ್ತವೆ. ಒಮ್ಮೆ ಈ ವ್ಯಸನಕ್ಕೆ ಬಿದ್ದ ನಂತರ, ಅದರಿಂದ ಹೊರಬರುವುದು ಅತ್ಯಂತ ಕಷ್ಟಕರವಾಗಿರುತ್ತದೆ. ಇದು ಕುಟುಂಬಗಳ ಶಾಂತಿಯನ್ನು ಕದಡುತ್ತದೆ, ವ್ಯಕ್ತಿಗಳ ಭವಿಷ್ಯವನ್ನು ಹಾಳುಮಾಡುತ್ತದೆ ಮತ್ತು ಅಪರಾಧ ಚಟುವಟಿಕೆಗಳಿಗೆ ಪ್ರೇರಣೆಯಾಗುತ್ತದೆ.

ಮಾದಕ ದ್ರವ್ಯ ಮುಕ್ತ ಸಮಾಜವನ್ನು ನಿರ್ಮಿಸಲು, ನಾವು ಹಲವು ಹಂತಗಳಲ್ಲಿ ಕಾರ್ಯನಿರ್ವಹಿಸಬೇಕು. ಮೊದಲನೆಯದಾಗಿ, ಶಿಕ್ಷಣ ಮತ್ತು ಜಾಗೃತಿ ಅತಿ ಮುಖ್ಯ. ಶಾಲಾ-ಕಾಲೇಜುಗಳಲ್ಲಿ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ನಿರಂತರವಾಗಿ ಅರಿವು ಮೂಡಿಸಬೇಕು. ಕುಟುಂಬಗಳು ತಮ್ಮ ಮಕ್ಕಳೊಂದಿಗೆ ಈ ಬಗ್ಗೆ ಮುಕ್ತವಾಗಿ ಸಂವಹನ ನಡೆಸಬೇಕು ಮತ್ತು ಅವರ ಸಮಸ್ಯೆಗಳನ್ನು ಆಲಿಸಬೇಕು. ಎರಡನೆಯದಾಗಿ, ಕಾನೂನು ಜಾರಿಯನ್ನು ಬಲಪಡಿಸುವುದು ಅನಿವಾರ್ಯ. ಮಾದಕ ದ್ರವ್ಯ ಕಳ್ಳಸಾಗಣೆದಾರರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಈ ಜಾಲವನ್ನು ಸಂಪೂರ್ಣವಾಗಿ ನಿರ್ಮೂಲನ ಮಾಡಬೇಕು.

ಮೂರನೆಯದಾಗಿ, ಚಿಕಿತ್ಸೆ ಮತ್ತು ಪುನರ್ವಸತಿ ಕೇಂದ್ರಗಳನ್ನು ಇನ್ನಷ್ಟು ಬಲಪಡಿಸಬೇಕು. ವ್ಯಸನಿಗಳಿಗೆ ಸೂಕ್ತ ವೈದ್ಯಕೀಯ ಚಿಕಿತ್ಸೆ, ಮಾನಸಿಕ ನೆರವು ಮತ್ತು ಸಾಮಾಜಿಕ ಪುನರ್ವಸತಿ ಸೌಲಭ್ಯಗಳನ್ನು ಒದಗಿಸುವುದು ಅಗತ್ಯ. ಅವರು ಮತ್ತೆ ಸಾಮಾನ್ಯ ಜೀವನಕ್ಕೆ ಮರಳಲು ಸಹಾಯ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಕೊನೆಯದಾಗಿ, ಸಮುದಾಯದ ಪಾತ್ರ ಅತ್ಯಂತ ನಿರ್ಣಾಯಕ. ನೆರೆಹೊರೆಗಳು, ಧಾರ್ಮಿಕ ಸಂಸ್ಥೆಗಳು, ಸ್ವಯಂಸೇವಾ ಸಂಸ್ಥೆಗಳು ಮತ್ತು ಸ್ಥಳೀಯ ನಾಯಕರು ಒಗ್ಗೂಡಿ ಮಾದಕ ದ್ರವ್ಯ ಸೇವನೆಯ ವಿರುದ್ಧ ಹೋರಾಡಬೇಕು. ಕ್ರೀಡೆ, ಕಲೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ಉತ್ತೇಜಿಸುವ ಮೂಲಕ ಯುವಕರನ್ನು ಸಕಾರಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೇರೇಪಿಸಬೇಕು.

ಮಾದಕ ದ್ರವ್ಯ ಮುಕ್ತ ಸಮಾಜದ ನಿರ್ಮಾಣವು ಕೇವಲ ಸರ್ಕಾರದ ಅಥವಾ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ. ಇದು ಪ್ರತಿಯೊಬ್ಬ ನಾಗರಿಕನ, ಪ್ರತಿಯೊಂದು ಕುಟುಂಬದ, ಮತ್ತು ಪ್ರತಿಯೊಂದು ಸಮುದಾಯದ ಜವಾಬ್ದಾರಿಯಾಗಿದೆ.

# ಸಿಎಂಗೂ ಶಾಸಕರಿಗೂ ಯಾವುದೇ ಗೊಂದಲ ಇಲ್ಲ: ಸಚಿವ ಪರಮೇಶ್ವರ್

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಿಎಂಗೂ ಶಾಸಕರಿಗೂ ಯಾವುದೇ ಗೊಂದಲ ಇಲ್ಲ ಎಂದು ಸಚಿವ ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸರ್ಕಾರದಲ್ಲಿ ಯಾವುದೇ ಗೊಂದಲಗಳು ಇಲ್ಲ. ಸಿಎಂಗೂ ಶಾಸಕರಿಗೂ ಯಾವುದೇ ಗೊಂದಲ ಇಲ್ಲ.

ಕೆಲ ಶಾಸಕರು ತಮ್ಮ ಕ್ಷೇತ್ರದ ಬಗ್ಗೆ ಮಾತಾಡಿದ್ದಾರೆ ಅಷ್ಟೇ ಇದಕ್ಕೆ ಇಡೀ ಸರ್ಕಾರವೇ ಗೊಂದಲ ಅಂತ ಹೇಳೋದು ಸರಿಯಲ್ಲ. ಸಿಎಂ ಅವರು ಇದೆಲ್ಲವನ್ನೂ ನೋಡ್ತಾರೆ ಎಂದು ಹೇಳಿದ್ದಾರೆ.

ಇನ್ನೂ ಸಚಿವರು ಕೈಗೆ ಸಿಗುತ್ತಿಲ್ಲ ಎಂಬ ಶಾಸಕರ ಆರೋಪಕ್ಕೆ ನಾನು ಎಲ್ಲರಿಗೂ ಸಿಕ್ತೀನಿ. ಕಚೇರಿಯಲ್ಲಿ, ಮನೆಯಲ್ಲಿ ಸಿಕ್ತೀನಿ. ನನಗೇನು ಸಮಸ್ಯೆ ಇಲ್ಲ. ಬೇರೆ ಸಚಿವರು ಸಿಗೊಲ್ಲ ಅನ್ನೋ ಬಗ್ಗೆ ನಾನು ಹೇಗೆ ಹೇಳಲಿ? ಬೇರೆ ಸಚಿವರ ಬಗ್ಗೆ ನಾನು ಮಾತಾಡೊಲ್ಲ ಎಂದಿದ್ದಾರೆ.

ಅಂತರಿಕ್ಷಯಾನ ಕೈಗೊಂಡ 2ನೇ ಭಾರತೀಯ ಶುಭಾಂಶು ಶುಕ್ಲಾ ಅವರ ಕುರಿತು ಲೇಖನ

# ಹೆಮ್ಮೆಯ ಗಗನಯಾನಿ ಶುಭಾಂಶು ಶುಕ್ಲಾ



ಬಾಹ್ಯಾಕಾಶ ಯಾನಕ್ಕೆ ಹೋಗುವ ಮೊದಲು ಸಂಗೀತವನ್ನು ಕೇಳುವುದು ನಾಸಾದ ಹಳೆಯ ಮತ್ತು ಪ್ರಮುಖ ಸಂಪ್ರದಾಯವಾಗಿದೆ. ಈ ಕಾರ್ಯಾಚರಣೆ ಅತ್ಯಂತ ಒತ್ತಡದಾಯಕ ಮತ್ತು ಅಪಾಯಕಾರಿ. ಅಂತಹ ಸಂದರ್ಭಗಳಲ್ಲಿ ಸಂಗೀತವು ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಮನಸ್ಸನ್ನು ಶಾಂತವಾಗಿರಿಸುತ್ತದೆ. ಇಂತಹ ಸಂದರ್ಭವನ್ನು ನೆನೆಯಲು ಕಾರಣ ನಮ್ಮ ಹೆಮ್ಮೆಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಜೂನ್ 25ರಂದು ಅಂತರಿಕ್ಷಯಾನಕ್ಕೆ ಅಣಿಯಾಗುವಾಗ ಶಾರುಖ್ ಖಾನ್ ಅವರ 'ಸ್ವದೇಶ್' ಚಿತ್ರದ ಯೇ ಜೋ ದೇಸ್ ಹೈ ತೇರಾ' ಹಾಡನ್ನು ಕೇಳುತ್ತಾ ನಿರಾಳವಾಗಿ ಗಗನಯಾನ ಮಾಡಿದ್ದು ಸಂತಸದ ವಿಷಯವಾಗಿದೆ.

ಗಗನಯಾತ್ರಿ ಶುಭಾಂಶು ಶುಕ್ಲಾ ಅಂತರಿಕ್ಷಯಾನ ಕೈಗೊಂಡ ಎರಡನೇ ಭಾರತೀಯ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ. 1984ರಲ್ಲಿ ಭಾರತದ ರಾಕೇಶ್ ಶರ್ಮಾ ರಷ್ಯಾದ ಗಗನನೌಕೆಯಲ್ಲಿ ಗಗನಯಾನ ಕೈಗೊಂಡಿದ್ದರು. ಅದಾದ 41 ವರ್ಷಗಳ ಬಳಿಕ ಶುಕ್ಲಾ ಅಂತರಿಕ್ಷಯಾನ ಕೈಗೊಂಡು ಯಶಸ್ವಿಯಾಗಿದ್ದಾರೆ.

1986ರಲ್ಲಿ ಉತ್ತರ ಪ್ರದೇಶದ ಲಕ್ನೋದಲ್ಲಿ ಜನಿಸಿದ ಶುಭಾಂಶು ಶುಕ್ಲಾ, ಅಲಿಗಂಜ್‌ನ ಸಿಟಿ ಮಾಂಟೆಸ್ಸರಿ ಶಾಲೆಯಲ್ಲಿ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದರು. 1999ರ ಕಾರ್ಗಿಲ್ ಯುದ್ಧದಿಂದ ಪ್ರೇರಿತರಾಗಿ, ಅವರು ಸ್ವತಂತ್ರವಾಗಿ ಯುಪಿಎಸ್‌ಸಿ ಎನ್‌ಡಿಎ ಪರೀಕ್ಷೆಗೆ ಅರ್ಜಿ ಸಲ್ಲಿಸಿ ಉತ್ತೀರ್ಣರಾದರು. ಅವರು ತಮ್ಮ ಮಿಲಿಟರಿ ತರಬೇತಿಯನ್ನು ಪೂರ್ಣಗೊಳಿಸಿದರು ಮತ್ತು 2005ರಲ್ಲಿ ರಾಷ್ಟ್ರೀಯ ರಕ್ಷಣಾ ಅಕಾಡೆಮಿಯಿಂದ ಕಂಪ್ಯೂಟರ್ ವಿಜ್ಞಾನದಲ್ಲಿ ಬ್ಯಾಚುಲರ್ ಆಫ್ ಸೈನ್ಸ್ ಪದವಿಯನ್ನು ಪಡೆದರು. ನಂತರ ಅವರು ಫ್ಲೈಯಿಂಗ್ ಶಾಖೆಗೆ ಆಯ್ಕೆಯಾದರು ಮತ್ತು ಭಾರತೀಯ ವಾಯುಪಡೆಯ ಅಕಾಡೆಮಿಯಲ್ಲಿ ತರಬೇತಿ ಪಡೆದರು. ಜೂನ್ 2006ರಲ್ಲಿ, ಅವರನ್ನು ಭಾರತೀಯ ವಾಯುಪಡೆಯ ಫೈಟರ್ ಸ್ಟ್ರೀಮ್‌ಗೆ ಫ್ಲೈಯಿಂಗ್ ಆಫೀಸರ್ ಆಗಿ ನಿಯೋಜಿಸಲಾಯಿತು.

ಅವರು ಫೈಟರ್ ಜೆಟ್‌ಗಳನ್ನು ಹಾರಿಸಿದ ಅನುಭವ ಹೊಂದಿದ್ದಾರೆ. ಅವರು ಗಗನಯಾತ್ರಿಯಾಗಲು ರಷ್ಯಾ ಮತ್ತು ಯುನೈಟೆಡ್ ಸ್ಟೇಟ್ಸ್‌ನಲ್ಲಿ ವಿಶೇಷ ತರಬೇತಿಯನ್ನು ಪಡೆದರು. ಅವರು ಸೂಕ್ಷ್ಮ ಗುರುತ್ವಾಕರ್ಷಣೆ, ತುರ್ತು ನಿರ್ವಹಣೆ ಮತ್ತು ವೈಜ್ಞಾನಿಕ ಪ್ರಯೋಗಗಳಲ್ಲಿ ಕೆಲಸ ಮಾಡುವಲ್ಲಿ ತರಬೇತಿ ಪಡೆದಿದ್ದನ್ನು ಇಲ್ಲಿ ಸ್ಮರಿಸಬಹುದು.

ಶುಭಾಂಶು ಶುಕ್ಲಾ ಅವರು ಭಾರತೀಯ ವಾಯುಪಡೆಯ ಪರೀಕ್ಷಾ ಪೈಲಟ್ ಮತ್ತು ಇಸ್ರೋ ಗಗನಯಾತ್ರಿ. ಭಾರತೀಯ ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಕ್ರಮದ ಭಾಗವಾಗಿ ಬಾಹ್ಯಾಕಾಶಕ್ಕೆ ಹಾರಿದ ನಾಲ್ಕು ಗಗನಯಾತ್ರಿಗಳಲ್ಲಿ ಅವರು ಮೊದಲಿಗರು ಮತ್ತು ಪ್ರಸ್ತುತ ಆಕ್ಸಿಯಮ್-4 ಮಿಷನ್‌ನಲ್ಲಿ ಗ್ರೂಪ್ ಕ್ಯಾಪ್ಟನ್ ಆಗಿದ್ದಾರೆ.

ಈ ಮಿಷನ್ ಫ್ಲೋರಿಡಾದಲ್ಲಿರುವ ನಾಸಾದ ಲಾಂಚ್ ಕಾಂಪ್ಲೆಕ್ಸ್ 39ಎನಿಂದ ಪ್ರಾರಂಭವಾಯಿತು. ನೀಲ್ ಆರ್ಮ್‌ಸ್ಟ್ರಾಂಗ್ ಚಂದ್ರಯಾನಕ್ಕಾಗಿ ಹೊರಟ ಸ್ಥಳ ಇದು. ಆಕ್ಸಿಯಮ್-4ರ ಎಲ್ಲಾ ಪ್ರಯಾಣಿಕರು ವಿಶೇಷ ಬಾಹ್ಯಾಕಾಶ ಸೂಟ್‌ಗಳನ್ನು ಧರಿಸಿ ಉಡಾವಣಾ ಪ್ಯಾಡ್ ತಲುಪಿ ಡ್ರ್ಯಾಗನ್ ಕ್ಯಾಪ್ಸುಲ್ ಸಿ213 ಅನ್ನು ಹತ್ತಿದರು. ಉಡಾವಣೆಗೆ ಮೊದಲು, ಅವರು ಸ್ಪೇಸ್‌ಎಕ್ಸ್ ಮತ್ತು ನಾಸಾ ತಂಡಗಳೊಂದಿಗೆ ಅಗತ್ಯ ತಾಂತ್ರಿಕ ಪರಿಶೀಲನೆಗಳನ್ನು ಪೂರ್ಣಗೊಳಿಸಿದರು.

ಭಾರತೀಯ ಗಗನಯಾನಿ ಶುಭಾಂಶು ಶುಕ್ಲಾ ಹಾಗೂ ಇತರ ಮೂವರನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಕೊಂಡೊಯ್ಯಲಿರುವ 'ಆಕ್ಸಿಯಂ4' ಅಂತರಿಕ್ಷ ಕಾರ್ಯಕ್ರಮದ ಭಾಗವಾಗಿ ಭಾರತದ ಗಗನಯಾತ್ರಿ ಶುಭಾಂಶು ಶುಕ್ಲಾ ಜೂನ್ 25ರಂದು ಮಧ್ಯಾಹ್ನ 12.01ಕ್ಕೆ (ಭಾರತೀಯ ಕಾಲಮಾನ) ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ಪ್ರಯಾಣ ಬೆಳೆಸಿದ್ದಾರೆ.

'ನಮಸ್ಕಾರ, ನನ್ನ ಪ್ರೀತಿಯ ದೇಶವಾಸಿಗಳೇ! 41 ವರ್ಷಗಳ ನಂತರ ನಾವು ಮತ್ತೊಮ್ಮೆ ಬಾಹ್ಯಾಕಾಶಕ್ಕೆ ಮರಳಿದ್ದೇವೆ. ಇದು ಅದ್ಭುತ ಸವಾರಿ. ನಾವು ಸೆಕೆಂಡಿಗೆ 7.5 ಕಿಲೋಮೀಟರ್ ವೇಗದಲ್ಲಿ ಭೂಮಿಯ ಸುತ್ತ ಸುತ್ತುತ್ತಿದ್ದೇವೆ. ನನ್ನ ಹೆಗಲ ಮೇಲೆ ಕೆತ್ತಲಾದ ತಿರಂಗಾವು ನಾನು ನಿಮ್ಮೆಲ್ಲರೊಂದಿಗೂ ಇದ್ದೇನೆ ಎಂದು ಹೇಳುತ್ತದೆ.

ನೀವೆಲ್ಲರೂ ಈ ಪ್ರಯಾಣದ ಭಾಗವಾಗಬೇಕೆಂದು ನಾನು ಬಯಸುತ್ತೇನೆ. ನಿಮ್ಮ ಎದೆಯೂ ಸಹ ಹೆಮ್ಮೆಯಿಂದ ಉಬ್ಬಬೇಕು. ಒಟ್ಟಾಗಿ, ಭಾರತದ ಮಾನವ ಬಾಹ್ಯಾಕಾಶ ಕಾರ್ಯಕ್ರಮವನ್ನು ಪ್ರಾರಂಭಿಸೋಣ. ಜೈ ಹಿಂದ್..! ಜೈ ಭಾರತ್..!' ಇದು ಶುಭಾಂಶು ಶುಕ್ಲಾರ ಸಂದೇಶವಾಗಿತ್ತು.

ಒಟ್ಟಾರೆಯಾಗಿ ಆಕ್ಸಿಯಮ್ -4 ತಂಡವು ಈಗ ಐಎಸ್‌ಎಸ್‌ನಲ್ಲಿ ತನ್ನ ಎರಡು ವಾರಗಳ ವೈಜ್ಞಾನಿಕ ಕಾರ್ಯಾಚರಣೆಯನ್ನು ಪ್ರಾರಂಭಿಸಲಿದೆ. ಇದರಲ್ಲಿ ಮಧುಮೇಹಕ್ಕೆ ಸಂಬಂಧಿಸಿದ ಸಂಶೋಧನೆಯೂ ಸೇರಿದೆ.

ವಿವಿಧ ದೇಶಗಳ ಗಗನಯಾತ್ರಿಗಳಿಗೆ ವೇದಿಕೆಯನ್ನು ಒದಗಿಸುವುದು ಹಾಗೂ ಬಾಹ್ಯಾಕಾಶದಿಂದ ಭೂಮಿಯ ಜನರಲ್ಲಿ ಸ್ಫೂರ್ತಿ ಮತ್ತು ಜಾಗೃತಿಯನ್ನು ಹರಡುವುದು, ಬಾಹ್ಯಾಕಾಶದಲ್ಲಿ ಹೊಸ ತಂತ್ರಜ್ಞಾನಗಳನ್ನು ಪರೀಕ್ಷಿಸುವುದು ಮತ್ತು ಅಭಿವೃದ್ಧಿಪಡಿಸುವುದು ಈ ಮಿಷನ್ ಉದ್ದೇಶವಾಗಿದೆ.



ಹೀಗಾಗಿ ಭಾರತ ಸೇರಿದಂತೆ ಪ್ರಪಂಚದಾದ್ಯಂತದ ಜನರು ಅವರಿಗೆ ಶುಭ ಹಾರೈಸುತ್ತಿದ್ದಾರೆ ಮತ್ತು ಅವರು ಈ ಕಾರ್ಯಾಚರಣೆಯ ಯಶಸ್ಸಿಗೆ ಭಾಗವಾಗಿದ್ದಾರೆ.

**- ಬಸವರಾಜ ಎಮ್.ಯರಗುಪ್ಪಿ.**
ರಾಮಗೇರಿ, ಲಕ್ಷ್ಮೇಶ್ವರ.

ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಕಾರ್ಯಾಧ್ಯಕ್ಷ ವಿ.ಕೆ. ಗುರುಮಠ ಮಾಹಿತಿ

# ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಜೂ.28ರಿಂದ




**■ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ಪಂಚಾಚಾರ್ಯ ಸೇವಾ ಸಂಘ, ಜಗದ್ಗುರು ಪಂಚಾಚಾರ್ಯ ವೇದ ಆಗಮನ ಸಂಸ್ಕೃತ ಪಾಠಶಾಲೆ ಹಾಗೂ ಅಖಿಲ ಭಾರತ ವೀರಶೈವ ಮಹಾಸಭಾ ಸಹಯೋಗದಲ್ಲಿ ಕಾಶೀ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ವಿವೇಕಾನಂದ ನಗರದ ಗಾಣಿಗ ಭವನದಲ್ಲಿ ಜೂನ್ 28ರಿಂದ ಜುಲೈ 7ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಕಾರ್ಯಾಧ್ಯಕ್ಷ ವಿ.ಕೆ. ಗುರುಮಠ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿನಿತ್ಯ ಬೆಳಿಗ್ಗೆ 7ರಿಂದ 11.30ರವರೆಗೆ ಕಾಶೀ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರ ಸಂಗೀತಯುಕ್ತ ಇಷ್ಟಲಿಂಗ ಪೂಜೆ ಹಾಗೂ ಸಂಜೆ 7ರಿಂದ 9ರವರೆಗೆ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ನೆರವೇರಲಿದೆ ಎಂದು ತಿಳಿಸಿದರು. ಜೂ. 28ರಂದು ಸಂಜೆ 7ಕ್ಕೆ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಆಶೀರ್ವಚನ ಕಾರ್ಯಕ್ರಮಗಳ ಉದ್ಘಾಟನಾ ಸಮಾರಂಭ ನೆರವೇರಲಿದ್ದು, ಕಾಶೀ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು ಸಾನ್ನಿಧ್ಯ ವಹಿಸುವರು. ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸುವರು. ಜೂ. 29ರಂದು ಸಂಜೆ 7ಕ್ಕೆ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಆಶೀರ್ವಚನ ಕಾರ್ಯಕ್ರಮದ ಧರ್ಮಸಭೆ ಜರುಗಲಿದ್ದು, ಪಂಡರಪುರದ ಸುಭಾಸ ಸಿದ್ಧರಾಮ ಮಮಾನೆ ಅವರಿಗೆ ಶ್ರೀ ಜಗದ್ಗುರು ಪಂಚಾಚಾರ್ಯ ಕೃಪಾಪೋಷಿತ ಧರ್ಮಪ್ರಕಾಶ ಪ್ರಶಸ್ತಿ ಹಾಗೂ ಉಡನಕಲ್‌ನ ಸರಕಾರಿ ಪ್ರೌಢಶಾಲೆಯ ಸಂಗೀತ ಶಿಕ್ಷಕ ವೀರಭದ್ರಪ್ಪ ಹಿರೆಬೆನಕಲ್ ಅವರಿಗೆ ದಿವ್ಯಾಂಗ ಪ್ರತಿಭಾ ಪುರಸ್ಕಾರ, ನಗದು ಸೇರಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಹೇಳಿದರು. ಜು. 7ರಂದು ಸಂಜೆ 7ಕ್ಕೆ ಕಾರ್ಯಕ್ರಮಗಳ ಮಹಾಮಂಗಲೋತ್ಸವ ನೆರವೇರಲಿದ್ದು, ಕಾಶೀ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು ಸಾನ್ನಿಧ್ಯ ವಹಿಸುವರು. ಮುಕ್ತಿಮಂದಿರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ಗೌರವಾಧ್ಯಕ್ಷ ಮಂಜುನಾಥ ಬೇಳೇರಿ, ಪ್ರಧಾನ ಕಾರ್ಯದರ್ಶಿ ಸುರೇಶ ಅಬ್ಬಿಗೇರಿ, ಸಿದ್ದಲಿಂಗಪ್ಪ ಚಳಗೇರಿ, ವೀರಭದ್ರಯ್ಯ ಧನ್ನೂರಹಿರೇಮಠ, ಸಂತೋಷ ಅಬ್ಬಿಗೇರಿ, ಉಮಾಪತಿ ಭೂಸನೂರಮಠ, ಮಹೇಶ ಬೆಲೇರಿ, ಎಂ.ಎಂ. ಹಿರೇಮಠ ಹಾಗೂ ಸಿ.ಜಿ. ಹಿರೇಗೌಡ್ರ ಇದ್ದರು.

ಜೂ. 28ರಿಂದ ಜು.7ರವರೆಗೆ ಎಂದಿನಂತೆ ಪ್ರತಿನಿತ್ಯ ಸಂಜೆ 7ಕ್ಕೆ ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಅವರು ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಗದ್ಗುರು ಪಂಚಾಚಾರ್ಯ ವೇದ ಆಗಮ ಸಂಸ್ಕೃತ ಪಾಠಶಾಲಾ ವಟುಗಳಿಂದ ವೇದಘೋಷ ಜರುಗಲಿದೆ. ಮಹಾಪೂಜೆಯಲ್ಲಿ ಪಾಲ್ಗೊಂಡ ದಂಪತಿಗಳಿಗೆ ಹಾಗೂ ಪ್ರಸಾದ ಸೇವೆಗೈದ ಭಕ್ತರಿಗೆ ಗುರುರಕ್ಷೆ ಹಾಗೂ ಮಹಾಪ್ರಸಾದ ನೆರವೇರಲಿದೆ ಎಂದು ವಿವರಿಸಿದರು.

# ಪಿಎಫ್‌ಐ ನಾಯಕ ಎ.ಎಸ್. ಇಸ್ಮಾಯಿಲ್‌ಗೆ ವೈದ್ಯಕೀಯ ಜಾಮೀನು ನಿರಾಕರಿಸಿದ ಸುಪ್ರೀಂ ಕೋರ್ಟ್

**■ವಿಜಯಸಾಕ್ಷಿ ಸುದ್ದಿ, ಹೊಸದಿಲ್ಲಿ**

ನಿಷೇಧಿತ ಸಂಘಟನೆ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (ಪಿಎಫ್‌ಐ) ನಾಯಕ ಎ.ಎಸ್. ಇಸ್ಮಾಯಿಲ್ ಅವರ ವೈದ್ಯಕೀಯ ಜಾಮೀನು ಅರ್ಜಿಯನ್ನು ಸುಪ್ರೀಂ ಕೋರ್ಟ್ ಮಂಗಳವಾರ ತಿರಸ್ಕರಿಸಿದೆ. ಕಾನೂನುಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯ್ದೆಯಡಿ (UAPA) ಅವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಅವರ ವೈದ್ಯಕೀಯ ಸ್ಥಿತಿ ತುರ್ತು ಸ್ವರೂಪದ್ದಲ್ಲ ಎಂದು ನ್ಯಾಯಾಲಯ ಹೇಳಿದೆ.

# ಸಂಗಮೇಶ ಹಾದಿಮನಿಯವರನ್ನು ಬೆಂಬಲಿಸಲು ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘದ ಚುನಾವಣೆ ಎಲ್ಲಾ ಜಿಲ್ಲೆಗಳಲ್ಲಿ ಜುಲೈ 6ರಂದು ಘೋಷಣೆಯಾಗಿದ್ದು, ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ಪ್ರತಿನಿಧಿಗಳ ಆಯ್ಕೆಗೆ ಚುನಾವಣೆ ಜರುಗುವುದು.

ಗದಗ ತಾಲೂಕಿನಿಂದ ಸಾಮಾಜಿಕ ಚಿಂತಕ ಸಂಗಮೇಶ ಹಾದಿಮನಿಯವರು ನಾಮಪತ್ರ ಸಲ್ಲಿಸಿದ್ದು, ಸಂಘಟನೆಯ ಮುಂಚೂಣಿಯಲ್ಲಿರುವ ಸಂಗಮೇಶ ಹಾದಿಮನಿಯವರನ್ನು ಬೆಂಬಲಿಸುವಂತೆ ಪ್ರೊ. ದಳವಾಯಿ ಸಮಾಜ ಭಾಂದವರಲ್ಲಿ ವಿನಂತಿಸಿದರು.

ಈ ಸಂದರ್ಭದಲ್ಲಿ ರಾಮಣ್ಣ ಇರಕಲ್ಲ, ಗುರಪ್ಪ ತಿರ್ಲಾಪೂರ, ಅಮಿತ ಪೂಜಾರ, ಹರೀಶ ಬಾರಕೇರ, ಬಸವರಾಜ ಗುಡಿಸಾಗರ, ಮಧುಶೇಖರ ಪೂಜಾರ, ಹೇಮಂತ ದಳವಾಯಿ ಮಂಜುನಾಥ ಗುಡಿಸಾಗರ, ಸುಜಾತ ಗುಡಿಸಾಗರ, ಸೌಮ್ಯ ಸುಣಗಾರ, ಕವಿತಾ ಗುಡಿಸಾಗರ, ರಾಜು ಪೂಜಾರ, ಶಂಕರಗೌಡ ರಾಹುತ್, ನಾಗರಾಜ ಸಮಾಜ ಬಾಂಧವರು ಉಪಸ್ಥಿತರಿದ್ದರು.

ಅಂತಾರಾಷ್ಟ್ರೀಯ ಸಹಕಾರ ವರ್ಷಾಚರಣೆ ಅಂಗವಾಗಿ ತಾಯಿಯ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ

# ಪರಿಸರ ಮಾಲಿನ್ಯದಿಂದ ಅಭಿವೃದ್ಧಿ ಕುಂಠಿತ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಗದಗ, ಅರಣ್ಯ ಇಲಾಖೆ ಗದಗ, ಕೆ.ಸಿ.ಸಿ. ಬ್ಯಾಂಕ್ ಧಾರವಾಡ, ಕೆ.ಎಂ.ಎಫ್ ಧಾರವಾಡ ಹಾಗೂ ಗದಗ ಜಿಲ್ಲೆಯ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ 'ಅಂತಾರಾಷ್ಟ್ರೀಯ ಸಹಕಾರ ವರ್ಷಾಚರಣೆ 2025'ರ ಅಂಗವಾಗಿ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ತಾಯಿಯ ಹೆಸರಿನಲ್ಲಿ ಒಂದು ಸಸಿ ನೆಡುವ ಕಾರ್ಯಕ್ರಮ ಗದುಗಿನ ಸಿ.ಎಸ್. ಪಾಟೀಲ ಪ್ರೌಢಶಾಲೆಯ ಸಭಾಭವನದಲ್ಲಿ ಜರುಗಿತು.

ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪರಿಸರ ಮಾಲಿನ್ಯದಿಂದ ಅನಾರೋಗ್ಯ ಸಮಸ್ಯೆಗಳು ಕಾಡುತ್ತಿವೆ. ಇವುಗಳಿಂದ ದೇಶದ ಪ್ರಗತಿ ಕುಂಠಿತವಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ನಾವು ಹಾಗೂ ಮುಂಬರುವ ಪೀಳಿಗೆಗಳಿಗೆ ಉತ್ತಮ ವಾತಾವರಣ ಒದಗಿಸುವದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಹೇಳಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ ಮಾತನಾಡಿ, ದೇಶ, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ನಮ್ಮ ಹಳ್ಳಿಗಳಿಂದ ಸಸಿ ನೆಡುವ ಕಾರ್ಯಕ್ರಮ ಪ್ರಾರಂಭವಾಗಬೇಕು. ಆರೋಗ್ಯವೇ ಭಾಗ್ಯವೆಂಬಂತೆ ಉತ್ತಮ ಆರೋಗ್ಯಕ್ಕೆ ಉಸಿರಾಡುವ ಗಾಳಿ, ಸೇವಿಸುವ ಆಹಾರ, ನೈರ್ಮಲ್ಯ ಮುಕ್ತ ನೀರು ತುಂಬಾ ಪ್ರಮುಖವಾಗಿದೆ ಎಂದರು.

ಗದಗ ಸಹಕಾರ ಸಂಘಗಳ ಲೆಕ್ಕ ಪರಿಶೋಧನೆ ಇಲಾಖೆ ಉಪನಿರ್ದೇಶಕ ಅರವಿಂದ ಎನ್.ನಾಗಜ್ಜನವರ ಮಾತನಾಡುತ್ತ, ಪ್ರಕೃತಿ ಮನುಷ್ಯನ ಆಸೆ ಈಡೇರಿಸಬಲ್ಲದು. ಆದರೆ ದುರಾಸೆಯನ್ನು ಈಡೇರಿಸಲಾರದು ಎಂಬುದನ್ನು ಅರಿತುಕೊಂಡು ಮುನ್ನಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕ್ ಅಧ್ಯಕ್ಷ ಮೋಹನ ಟಿ.ಕೋಟಿ, ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಪುಷ್ಪಾ ಕೆ.ಕಡಿವಾಳ, ಜಿಲ್ಲಾ ನಿಯಂತ್ರಣಾಧಿಕಾರಿ ಎಸ್.ವ್ಹಿ. ಚಳಗೇರಿ ಸಿ.ಎಸ್. ಪಾಟೀಲ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಡಾ. ಎಂ.ಆರ್. ನಾಯಕ, ಡಾ. ಎಸ್.ಜಿ. ಕೊಲಮಿ, ಡಾ. ಆರ್.ಎನ್. ಹಂಸನೂರ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಪಾಟಿಲ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವಿ.ಮಂಕಣಿ ವಿಶೇಷ ಉಪನ್ಯಾಸ ನೀಡಿದರು. ವಿದ್ಯಾರ್ಥಿನಿಯರಾದ ನಿರ್ಮಲಾ ಲಮಾಣಿ, ಖುಷಿ ಲಮಾಣಿ ಪ್ರಾರ್ಥಿಸಿದರು. ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿರುವ ಎಲ್ಲಾ ಸಹಕಾರ ಸಂಘಗಳು ತಮ್ಮ ಸಂಸ್ಥೆಗಳು ಹಾಗೂ ಸರ್ಕಾರಿ ರಸ್ತೆ, ಆಟದ ಮೈದಾನ, ಉದ್ಯಾನವನಗಳಂತಹ ಸ್ಥಳಗಳಲ್ಲಿ ಹೆಚ್ಚಿನ ಸಸಿಗಳನ್ನು ನೆಡುವುದರ ಮೂಲಕ ನಮಗೆ ಬೇಕಾದ ಆರೋಗ್ಯವನ್ನು ಪಡೆಯುವದರೊಂದಿಗೆ ಪರಿಸರ ಸಂರಕ್ಷಣೆಯ ಅರಿವು ಮೂಡಿಸೋಣ ಎಂದು ಹೇಳಿದರು.

# ಬಡ ವಿದ್ಯಾರ್ಥಿನಿಗೆ ಕಲಿಕಾ ಶುಲ್ಕದ ನೆರವು



**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಡಾ. ಜಾಕೀರ ಹುಸೇನ ಕಾಲೋನಿಯ ಮುಸ್ಲಿಂ ಜಮಾತ ವತಿಯಿಂದ ಬಡ ವಿದ್ಯಾರ್ಥಿನಿಯ ಶಾಲೆಯ ವಾರ್ಷಿಕ ಕಲಿಕಾ ಶುಲ್ಕ ನೀಡಿ ಸಹಾಯ ಮಾಡಿದರು.

ಗದಗ ಶಹರದ ಆರ್ಯಭಟ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿ ಸಮನ್ ಇಸ್ಮಾಯಿಲ್‌ಸಾಬ ದಂಡಿನ ಇವಳ ವಾರ್ಷಿಕ ಕಲಿಕಾ ಶುಲ್ಕ 15 ಸಾವಿರ ರೂಪಾಯಿಗಳನ್ನು ನೀಡಿದರು. ಡಾ. ಜಾಕೀರ ಹುಸೇನ ಕಾಲೋನಿ ಮುಸ್ಲಿಂ ಜಮಾತಿನ ಅಧ್ಯಕ್ಷ ಎಸ್.ಎ. ಟೋಪಿವಾಲೆ, ಸದಸ್ಯರಾದ ಎಂ.ಸಿ. ಶೇಖ್, ಎಂ.ಎಲ್. ಗುಳೇದಗುಡ್ಡ, ಶಬ್ಬೀರ್ ಶಿರಹಟ್ಟಿ ಕಾಲೇಜಿಗೆ ಭೇಟಿ ನೀಡಿ ಪ್ರಾಚಾರ್ಯರ ಸಮ್ಮುಖದಲ್ಲಿ ವಿದ್ಯಾರ್ಥಿನಿಯ ಕಲಿಕಾ ಶುಲ್ಕದ ಚೆಕ್‌ನ್ನು ನೀಡಿದರು.

# ದೇವಿಗೆ ಉಡಿ ತುಂಬುವ ಕಾರ್ಯಕ್ರಮ



**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ವರುಣ ದೇವನ ಕೃಪೆಗಾಗಿ ಹೋಬಳಿಯ ರೈತ ಸಮೂಹ ಗ್ರಾಮದ ವಿವಿಧ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿ ಉಡಿ ತುಂಬು ಕಾರ್ಯವನ್ನು ನೆರವೇರಿಸಿದರು.

ಗ್ರಾಮದ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ದೇವಿ ಮೂರ್ತಿಗೆ ವಿಶೇಷವಾಗಿ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಲಾಯಿತು.

ನಂತರ ದುರ್ಗಾದೇವಿ ಕೆರೆಯಲ್ಲಿ ದೊಡ್ಡದಾದ ಬಸವಣ್ಣನ ಮಣ್ಣಿನ ಮೂರ್ತಿಯನ್ನು ಸ್ಥಾಪಿಸಲಾಯಿತು. ಷಡಕ್ಷರಯ್ಯ ಬದ್ನಿಮಠ ಅವರ ನೇತೃತ್ವದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವ ಮೂಲಕ ಬಸವಣ್ಣನ ಮೂರ್ತಿಗೆ ಪೂಜೆ ಸಲ್ಲಿಸಲಾಯಿತು.

ಕಳೆದ 35 ವರ್ಷಗಳಿಂದ ವರುಣ ದೇವನ ಕೃಪೆಗಾಗಿ ಪ್ರತಿ ಮುಂಗಾರು ಸಂದರ್ಭದಲ್ಲಿ ದಂಡಿನ ದುರ್ಗಾದೇವಿಗೆ ಉಡಿ ತುಂಬುವ ಕಾರ್ಯ ನಡೆಯುತ್ತಾ ಬಂದಿದೆ.

### ಸಂಜೀವಿನಿ ಮಾಸಿಕ ಸಂತೆಯ ತಾಲೂಕು ಮಟ್ಟದ ವಸ್ತು ಪ್ರದರ್ಶನಕ್ಕೆ ಚಾಲನೆ

# ಮಾಸಿಕ ಸಂತೆಯಿಂದ ಮಹಿಳೆಯರಲ್ಲಿ ಸ್ವಾವಲಂಬನೆ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಸಂಜೀವಿನಿ ಯೋಜನೆಯಡಿ ಆರ್ಥಿಕ ಸೌಲಭ್ಯ ಪಡೆದಿರುವ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರು ಮನೆಯಲ್ಲಿಯೇ ವಿವಿಧ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ. ಈ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕಿಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಮಾಸಿಕ ಸಂತೆಯನ್ನು ಆರಂಭಿಸಲು ಸರ್ಕಾರ ಸೂಚಿಸಿದ್ದು, ಮುಂಡರಗಿ ತಾಲೂಕಿನಾದ್ಯಂತ ಆರಂಭಿಸಲಾಗಿದೆ ಎಂದು ತಾಲೂಕು ಪಂಚಾಯಿತಿ ಇಓ ವಿಶ್ವನಾಥ ಹೊಸಮನಿ ಹೇಳಿದರು.

ಡಂಬಳ ಗ್ರಾ.ಪಂ ಸಂತೆ ಚಾವಣಿಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಸಂಜೀವಿನಿ ಮಾಸಿಕ ಸಂತೆಯ ತಾಲೂಕು ಮಟ್ಟದ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಮಾರಾಟ ಮಳಿಗೆಗೆ ಚಾಲನೆ ನೀಡಿ ಮಾತನಾಡಿದರು.




ಗ್ರಾಮೀಣ ಮಾಸಿಕ ಸಂತೆಯ ಆಯೋಜನೆ ಮೂಲಕ ಮಹಿಳೆಯರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಹಾಗೂ ಉತ್ಪಾದಕರಿಂದ ನೇರವಾಗಿ ಗ್ರಾಹಕರಿಗೆ ಉತ್ಪನ್ನಗಳನ್ನು ಪರಿಚಯಿಸುವುದು ಹೆಚ್ಚು ಹೆಚ್ಚು ಮಹಿಳೆಯರು ಸ್ವಾವಲಂಬಿಗಳಾಗಲು ಉಪಯುಕ್ತವಾಗಿದೆ ಎಂದು ತಿಳಿಸಿದರು.

ಪಿಡಿಓ ಲತಾ ಮಾನೆ ಮಾತನಾಡಿ, ಸ್ವಸಹಾಯ ಸಂಘಗಳ ಮಹಿಳೆಯರು ಸ್ಥಳೀಯವಾಗಿ ಉತ್ಪಾದಿಸಿದ ಉತ್ಪನ್ನಗಳಿಗೆ ಮೌಲ್ಯವರ್ಧನೆ ನೀಡುವುದು, ಮಧ್ಯವರ್ತಿಗಳಿಲ್ಲದೆ ನೇರವಾಗಿ ಗ್ರಾಹಕರಿಗೆ ತಲುಪಿಸಲು ಮತ್ತು ಸದಸ್ಯರ ಆದಾಯವನ್ನು ಹೆಚ್ಚಿಸಲು ಸೂಕ್ತ ಮಾರುಕಟ್ಟೆ, ಪ್ರದರ್ಶನಕ್ಕೆ ಉತ್ತಮ ಅವಕಾಶ ಕಲ್ಪಿಸುವುದು ಸಂಜೀವಿನಿ ಮಾಸಿಕ ಸಂತೆಯ ಉದ್ದೇಶವಾಗಿದೆ.

ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ ಮಾತನಾಡಿ, ಸಂತೆಗಳಲ್ಲಿ ಹೆಚ್ಚಿನ ಸಂಘಗಳು ಪಾಲ್ಗೊಳ್ಳಬೇಕು. ತಾವು ತಯಾರಿಸಿದ ಪರಿಶುದ್ಧವಾದ ಉತ್ಪನ್ನಗಳ ಬಗ್ಗೆ ಪ್ರಚಾರವನ್ನೂ ಮಾಡಬೇಕು. ಸಾಮಾಜಿಕ ಜಾಲತಾಣಗಳು ಹಾಗೂ ವಾಟ್ಸಪ್ ಮೂಲಕ ಉತ್ಪನ್ನಗಳ ಪ್ರಚಾರ ನಡೆಸಿ ಆನ್‌ಲೈನ್ ಮೂಲಕ ಮಾರಾಟ ಮಾಡಲು ಪ್ರಯತ್ನಿಸಿ ಎಂದು ಹೇಳಿದರು.

ಪ್ರತಿಯೊಬ್ಬ ಮಹಿಳೆಯರು ಮನೆಯ ಶೌಚಾಲಗಳನ್ನು ಬಳಸಿಕೊಳ್ಳಿ ಮತ್ತು ಶೌಚಾಲಯ ಇಲ್ಲದಿರುವವರು ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಕೆವಿಜಿ ಬ್ಯಾಂಕ್ ಫೀಲ್ಡ್ ಆಫೀಸರ್ ಶ್ರೀಧರ ಮಾತನಾಡಿ, ಸಂಜೀವಿನಿ ಮಾಸಿಕ ಸಂತೆಯು ಗ್ರಾಮ ಮಟ್ಟದ್ದಾಗಿದ್ದು, ಮಹಿಳೆಯರು ಯೋಜನೆಯ ಲಾಭವನ್ನು ಪಡೆದುಕೊಂಡು ಸ್ವಾವಲಂಬಿಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಂಬಳ ಗ್ರಾ.ಪಂ ಮಟ್ಟದ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಮಂಗಳಾ ಸಣ್ಣಪ್ಯಾಟಿ, ಖಜಾಂಚಿ ವಿಜಯಲಕ್ಷ್ಮೀ ಗುರುವಿನ, ಕೆನರಾ ಬ್ಯಾಂಕ್ ಸಂಯೋಜಕ ಸಂದೀಪ ಕಟ್ಟಿ, ಗ್ರಾ.ಪಂ ಸದಸ್ಯರಾದ ಶಂಕ್ರಪ್ಪ ಗಡಗಿ, ಮಾರುತಿ ಬಿಸನಳ್ಳಿ, ಜ್ಯೋತಿ ಬಾವಿ, ಮಹಾದೇವಕ್ಕ ಕೊಳ್ಳಾರ, ಯಲ್ಲಮ್ಮ ಬಂಡಿ, ಶೇಕವ್ವ ಪಲ್ಲೇದ, ಕಿರಣಕುಮಾರ ಎಂ.ಸಂಗನಾಳ, ಲಲಿತಾ ಜೋಂಡಿ, ಸಂಜೀವಿನಿ ಮಹಿಳಾ ಸದಸ್ಯರು, ಸಿಬ್ಬಂದಿ ವರ್ಗ, ಗ್ರಾ.ಪಂ ಸಿಬ್ಬಂದಿ ವರ್ಗ ಇದ್ದರು.

# ಕುಡಿಯುವ ನೀರಿನ ಘಟಕ ಉದ್ಘಾಟನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಬಿಂಕದಕಟ್ಟಿಯ ಶ್ರೀರಾಮ ಕರುಣಾನಂದ ಶಿಕ್ಷಣ ಸಂಸ್ಥೆಯ ಶಾಲೆಯಲ್ಲಿ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಲಾಯಿತು. ಶ್ರೀ ಭಗವಾನ್ ಸತ್ಯಸಾಯಿಬಾಬಾ ಸೇವಾ ಸಮಿತಿ, ಗದಗ ಇವರು ಶಾಲಾ ಮಕ್ಕಳಿಗೆ ಕುಡಿಯುವ ನೀರಿನ ಘಟಕವನ್ನು ಕೊಡುಗೆಯಾಗಿ ನೀಡಿದರು. ಸಮಿತಿಯು ಈ ಶಾಲೆಯಲ್ಲಿ ಪ್ರತೀ ವಾರಕ್ಕೊಮ್ಮೆ ಮೌಲ್ಯ ಶಿಕ್ಷಣ (ಬಾಲವಿಕಾಸ )ತರಗತಿಗಳನ್ನು ನಡೆಸುತ್ತಿದೆ.

ಸತ್ಯಸಾಯಿಬಾಬಾ ಸೇವಾ ಸಮಿತಿಯ ಜಿಲ್ಲಾಧ್ಯಕ್ಷ ಭೋಜರಾಜ್ ಕಬಾಡಿ, ಶ್ರೀರಾಮ ಕರುಣಾನಂದ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ರವಿ ಎಂ.ಮೂಲಿಮನಿ ನೀರಿನ ಘಟಕವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಅಮರ್ ವೋರಾ, ಯಶೋಧರಗೌಡ ಜಿ.ಪಾಟೀಲ್, ಸಂಸ್ಥೆಯ ಅಧ್ಯಕ್ಷರಾದ ವಿ.ಡಿ. ರಂಗಪ್ಪನವರ ಉಪಸ್ಥಿತರಿದ್ದರು. ಶಾಲೆಯ ಪ್ರಾಂಶುಪಾಲ ರಾಘವೇಂದ್ರ ಕೆ.ಆರ್. ಕಾರ್ಯಕ್ರಮ ಆಯೋಜಿಸಿದ್ದರು.

# ಚಿತ್ರಕಲೆ ಮಕ್ಕಳ ಕಲಿಕೆಗೆ ಪೂರಕ



**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಚಿತ್ರಕಲೆಯು ಎಲ್ಲಾ ಕಾಲದಲ್ಲೂ ಸಲ್ಲುವ ಕಲೆಯಾಗಿದ್ದು, ಮಕ್ಕಳ ಕಲಿಕೆಗೆ ಪೂರಕವಾಗಿದೆ ಎಂದು ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯಲ್ಲಿ ಚಿತ್ರಕಲಾ ಶಿಕ್ಷಕರನ್ನು ಸನ್ಮಾನಿಸಿ ಮಾತನಾಡಿ, ಚಿತ್ರಕಲೆ ಒಂದೇ ಚಿತ್ರದಲ್ಲಿ ಸಾಕಷ್ಟು ವಿಷಯಗಳನ್ನು ತಿಳಿಯುವಂತೆ ತೋರಿಸಿಕೊಡುವ ಅದ್ಭುತ ಕಲೆಯಾಗಿದ್ದು, ಮಕ್ಕಳು ಪ್ರೌಢ ಹಂತದಲ್ಲಿ ಹೆಚ್ಚು ಹೆಚ್ಚು ಚಿತ್ರಗಳನ್ನು ಬಿಡಿಸುವತ್ತ ಆಸಕ್ತಿ ವಹಿಸಬೇಕು ಎಂದರು. ನೂರಹ್ಮದ ನದಾಫ್, ಎಲ್.ಡಿ. ರಾಠೋಡ, ವಿ.ಟಿ. ಅಂಗಡಿ. ಬಸವರಾಜ ಗೌರಿಮನಿ, ಜಿ.ಆರ್. ಕುಂದರಗಿ, ಎಸ್.ವಿ. ತಿಮ್ಮಾಪೂರ, ಗೀತಾ ಪಾಟೀಲ್, ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪಾ ಮಾನೇಗಾರ, ಮಾಹಾಂತೇಶ ಕೆಂಚನಾಯ್ಕರ್, ಗುಳಪ್ಪ ಮಜ್ಜಿಗುಡ್ಡ ಇದ್ದರು.

### ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಚಾಲನೆ

# ಮಕ್ಕಳಲ್ಲಿ ಅಸಮಾನತೆ ಬೇಡ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಜಿಲ್ಲೆಯಾದ್ಯಂತ 1,622 ಅಂಗನವಾಡಿ ಕೇಂದ್ರಗಳಲ್ಲಿ ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನದೊಂದಿಗೆ ಪೌಷ್ಠಿಕ ಆಹಾರ ಅಭಿಯಾನದ ಬಗ್ಗೆಯೂ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಧಾರವಾಡ ರಾಜೀವ ಗಾಂಧಿ ನಗರದ ಆತ್ಮಾನಂದ ಸಮುದಾಯ ಭವನದಲ್ಲಿ ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಜೂನ್ 16ರಿಂದ ಜುಲೈ 31ರವರೆಗೆ ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನವನ್ನು ಪ್ರಾರಂಭಿಸಿದ್ದು, ಹುಟ್ಟಿದ ಮಗುವಿನಿಂದ ಹಿಡಿದು ಆರು ವರ್ಷದವರೆಗಿನ ಮಕ್ಕಳಿಗೆ ತೀವ್ರತರ ಅತಿಸಾರದಿಂದ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಈ ಅಭಿಯಾನವನ್ನು ಮಾಡಲಾಗುತ್ತಿದೆ ಎಂದು ಹೇಳಿದರು.



ಅಂಗನವಾಡಿ ಸೌಲಭ್ಯಗಳನ್ನು ಎಲ್ಲರಿಗೂ ತಲುಪಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಮನೆಮನೆಗೆ ಭೇಟಿ ನೀಡಿ ಮಕ್ಕಳ ಮಾಹಿತಿ, ಅವರ ಬೆಳವಣಿಗೆ ಬಗ್ಗೆ ಗಮನಹರಿಸಬೇಕು. ಮಕ್ಕಳಲ್ಲಿ ಅಸಮಾನತೆ ಬೇಡ. ಎಲ್ಲರನ್ನು ಒಂದಾಗಿ ಕಾಣಬೇಕು ಎಂದು ತಿಳಿಸಿದರು

ಇದು ತಾಯಂದಿರಿಗೆ ಜಾಗೃತಿ ಕಾರ್ಯಕ್ರಮ ಆಗಿದೆ. ತಾಯಿ-ಮಗುವಿನ ಮಧ್ಯ ಅವಿನಾಭಾವ ಸಂಬಂಧವಿದೆ. ಮಗುವಿಗೆ ಎದೆ ಹಾಲು ಮಹತ್ವದ್ದಾಗಿದೆ. ತಾಯಂದಿರು ಮಗು ಜನಿಸಿದ ಕನಿಷ್ಠ ಆರು ತಿಂಗಳು ಎದೆ ಹಾಲು ಉಣಿಸಬೇಕು.

ಎದೆ ಹಾಲಿಗೆ ಪರ್ಯಾಯ ಆಹಾರವಿಲ್ಲ. ಇಂತದಕ್ಕೆ ಸೌಂದರ್ಯ ಪ್ರಜ್ಞೆ, ಆಧುನಿಕ ಜೀವನ ಶೈಲಿ ಅಡ್ಡ ಬರಬಾರದು ಎಂದು ಡಿಸಿ ದಿವ್ಯ ಪ್ರಭು ಹೇಳಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಸರ್ಕಾರದಿಂದ ಬಂದಿರುವ ಪೋಷಕಾಂಶವುಳ್ಳ ಆಹಾರವನ್ನು ಸರಿಯಾದ ಪ್ರಮಾಣದಲ್ಲಿ ಮಕ್ಕಳಿಗೆ ಕೊಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರೊಬೆಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಮಹಿಳಾ ಮತ್ತು ಮಕ್ಕಳ ಉಪನಿರ್ದೇಶಕಿ ಡಾ.ಎಚ್.ಎಚ್. ಕುಕನೂರ, ಜಿಲ್ಲಾ ನಿರೂಪಣಾಧಿಕಾರಿ ಡಾ. ಕಮಲಾ ಬೈಲೂರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಎಸ್.ಎಂ. ಹೊನಕೇರಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯೆ ಲಕ್ಷ್ಮೀ ಹಿಂಡಸಗೇರಿ, ಅಶೋಕ ತುರಾಯಿದಾರ, ಮಹೇಶ ಕುಲಗಪ್ಪನವರ ವೇದಿಕೆ ಮೇಲೆ ಉಪಸ್ಥಿತರಿದ್ದರು.

# ಬಿವಿವಿ ಶಾಲೆಯ ಶಾಲಾ ನಾಯಕರ ಪದಗ್ರಹಣ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಶಾಲಾ ನಾಯಕರ ಪದಗ್ರಹಣ ಸಮಾರಂಭ ನೆರವೇರಿತು.

ಸಮಾರಂಭದ ಅತಿಥಿಯಾಗಿ ಆಗಮಿಸಿದ್ದ ನಿವೃತ್ತ ಡಿಜಿಪಿ ಸಿ.ಹೆಚ್. ಪ್ರತಾಪರೆಡ್ಡಿ ಮಾತನಾಡಿ, ಎಲ್ಲಾ ವಿದ್ಯಾರ್ಥಿಗಳು ಶಿಸ್ತಿನ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಮೊಬೈಲ್ ಫೋನ್‌ನಲ್ಲಿ ಉತ್ತಮ ಅಂಶವನ್ನು ಮಾತ್ರ ಕಲಿಯಬೇಕು. ಪಾಲಕರು ಮತ್ತು ಶಿಕ್ಷಕರು ತಿಳಿಸಿಕೊಟ್ಟ ಮಾರ್ಗದಲ್ಲಿ ಮಕ್ಕಳು ನಡೆಯಬೇಕು. ಅಂದಾಗ ಮಾತ್ರ ವಿದ್ಯಾರ್ಥಿಗಳು ಗುರಿ ಮುಟ್ಟಲು ಸಾಧ್ಯ ಎಂದು ತಿಳಿಸಿದರು.




ಶಾಲೆಯ ನಿರ್ದೇಶಕ ವಿನಾಯಕ ಆರ್ ಮಾತನಾಡಿ, ಶಾಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳಲ್ಲಿರುವ ವಿವಿಧ ಪ್ರತಿಭೆಗಳಿಗೆ ಅನುಗುಣವಾಗಿ ಮಂತ್ರಿಮಂಡಲದ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ. ತಮಗೆಕೊಟ್ಟ ಕರ್ತವ್ಯಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸಿ ಎಂದರು.

ಶಾಲಾ ಸಂಸತ್‌ಗೆ ಆಯ್ಕೆಯಾದ ಶಾಲಾ ನಾಯಕ ಅಮೃತಗೌಡ ಗೌಡರ್, ನಾಯಕಿ ಐಮನ್ ಕೊಪ್ಪಳ, ಉಪನಾಯಕ ವೆಂಕಟೇಶ ಕಲ್ಮನಿ, ಉಪನಾಯಕಿ ದಿವ್ಯಾ ರಾಥೋಡ ಅವರಿಗೆ ಪ್ರಾಚಾರ್ಯ ವಿ.ಎಮ್. ಅಡ್ನೂರ ಪ್ರಮಾಣ ವಚನ ಬೋಧಿಸಿದರು. ಮಂತ್ರಿಮಂಡಲದ ಸದಸ್ಯರಿಗೆ ಶಾಲೆಯ ಸಂಯೋಜಕರಾದ ಯಾಸ್ಮಿನ್ ಮೊಮಿನ್ ಪ್ರಮಾಣ ವಚನ ಬೋಧಿಸಿದರು. ಪ್ಲೇ ಹೋಮ್‌ನ ಮುಖ್ಯಸ್ಥರಾದ ಗಂಗಾ, ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು. ಕಾರ್ಯದರ್ಶಿ ಎಸ್. ರವಿ, ಇ.ಎಲ್.ಸಿ ಮುಖ್ಯಸ್ಥರಾದ ಮಲ್ಲಿಕಾ ರವಿ, ಆಡಳಿತ ಮಂಡಳಿಯ ಸದಸ್ಯರಾದ ಗಾಯತ್ರಿ ವಿ ಮುಂತಾದವರು ಉಪಸ್ಥಿತರಿದ್ದರು.

ಶಾಲೆಯ ಪಂಡಿತ ಪುಟ್ಟರಾಜ ಮ್ಯೂಸಿಕ್ ಕ್ಲಬ್ ತಂಡದ ಪ್ರಕೃತಿ ಅಡವಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ನಕ್ಷತ್ರ ಹಿರೇಮಠ ಪರಿಚಯಿಸಿದರು. ಸಂಜನಾ ಗೌಡರ್ ಸ್ವಾಗತಿದರು. ಭೂಮಿಕಾ ಹೊಂಬಳ ಮತ್ತು ಸಮರ್ಥ ಸಾಮಂತ್ರಿ ನಿರೂಪಿಸಿದರು. ಸ್ವರೂಪ ಜಂಗ್ಲಿ ವಂದಿಸಿದರು. ಶ್ವೇತಾ ಯಮಗೌಳಿ, ಶಿವಂ ಬಾರಕೇರ ಬ್ಯಾಚ್ ವಿತರಣಾ ಸಮಾರಂಭವನ್ನು ನಡೆಸಿಕೊಟ್ಟರು.

### ಬ್ಯೂಟಿ ಪಾರ್ಲರ್‌ನಲ್ಲಿ ಗ್ರಾಹಕಿಯೊಂದಿಗೆ ಅನುಚಿತವಾಗಿ ವರ್ತಿಸಿದ್ದ ನೌಕರ

# ಅಪರಾಧಿಗೆ 15 ತಿಂಗಳು ಜೈಲು



**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ವಿದ್ಯಾಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಒಂದು ಯುನಿಸೆಕ್ಸ್ ಸಲೂನ್ ಬ್ಯೂಟಿ ಪಾರ್ಲರ್ (ಪುರುಷ ಮತ್ತು ಮಹಿಳಾ ಕೆಲಸಗಾರರು ಮಹಿಳೆ ಮತ್ತು ಪುರುಷರಿಗೆ ಸೇವೆ ಮಾಡುವ ಸಲೂನ್) ಒಂದರಲ್ಲಿ ಮಹಿಳೆಯೊಬ್ಬಳು ತನ್ನ ಹೇರ್ ಸೆಟ್ಟಿಂಗ್ ಮಾಡಿಸಲು 16,000 ರೂ.ಗಳನ್ನು ಪಾವತಿಸಿದ್ದು, 4 ಸಿಟ್ಟಿಂಗ್‌ಗಳಲ್ಲಿ ಸದರಿ ಟ್ರೀಟ್‌ಮೆಂಟ್ ನಡೆದಿತ್ತು. ಈ ಪ್ರಕರಣದ ಆರೋಪಿಯಾದ ಸೋನು, ಮಹಮೂದ್, ಆವೇದ್, ಕುಡಾ, ಅಲಿಸೇರ್, ಚಂಡಿಗಢ ಎಂಬಾತನು ಸದರಿ ಪಾರ್ಲರ್‌ನಲ್ಲಿ (ಸಲೂನ್) ಕೆಲಸಗಾರನಾಗಿದ್ದ. ಸದರಿ ಮಹಿಳೆಗೆ ಸುಮಾರು 8-9 ತಿಂಗಳಿನಿಂದ ಪರಿಚಯವಾಗಿ, ಹೇರ್ ಟ್ರೀಟ್‌ಮೆಂಟ್ ಕೊಡುತ್ತ ಬಂದಿದ್ದ. ಸದರಿ ಮಹಿಳೆ ತನ್ನ ಹೇರ್ ಟ್ರೀಟ್‌ಮೆಂಟ್‌ನ ಕೊನೆಯ ಸಿಟ್ಟಿಂಗ್‌ಗೆ ಹೋದಾಗ, ಸದರಿ ಆರೋಪಿ ಪಾರ್ಲರ್‌ನಲ್ಲಿ ಜನಸಂದಣಿ ಇರುವುದರಿಂದ, ಪಾರ್ಲರ್‌ನಲ್ಲಿ ಪ್ರತ್ಯೇಕ ಕೊಠಡಿಯಲ್ಲಿ ಟ್ರೀಟ್‌ಮೆಂಟ್ ಶುರು ಮಾಡಿದ್ದ. ಸದರಿ ದಿನ ಆರೋಪಿ ಟ್ರೀಟ್‌ಮೆಂಟ್ ಕೊಡುವಾಗ ಆ ರೂಮಿನ ದೊಡ್ಡ ಲೈಟ್ ಆರಿಸಿ, ಚಿಕ್ಕ ಲೈಟ್‌ನ್ನು ಹಚ್ಚಿ, ರೂಮಿನ ಬಾಗಿಲ ಚಿಲಕ ಹಾಕಿದ್ದು, ಸದರಿ ಮಹಿಳೆ ಅದನ್ನು ಪ್ರಶ್ನಿಸಿದಾಗ ಟ್ರೀಟ್‌ಮೆಂಟ್‌ಗೆ ಬೇಕಾಗುತ್ತದೆ ಎಂದು ಹೇಳಿದ್ದ. ಸದರಿ ಮಹಿಳೆಗೆ ಆರೋಪಿಯ ಮೇಲೆ ನಂಬಿಕೆ ಇದ್ದಿದ್ದರಿಂದ ಸುಮ್ಮನಾಗಿರುತ್ತಾಳೆ. ಆರೋಪಿ ಹೇರ್ ಟ್ರೀಟ್‌ಮೆಂಟ್ ಕೊಡುತ್ತಾ ಆ ಮಹಿಳೆಯೊಂದಿಗೆ ಅನುಚಿತವಾಗಿ ವರ್ತಿಸಿ ದೌರ್ಜನ್ಯ ಎಸಗಿರುತ್ತಾನೆ. ನಂತರ ನೊಂದ ಮಹಿಳೆ ವಿದ್ಯಾಗಿರಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾಳೆ.

ಧಾರವಾಡ ವಿದ್ಯಾಗಿರಿ ಪೊಲೀಸರು ದೂರು ಸ್ವೀಕರಿಸಿ, ತನಿಖೆ ಮಾಡಿ ಆರೋಪಿ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದರು. ಧಾರವಾಡ 3ನೇ ಹೆಚ್ಚುವರಿ ಸಿ.ಜೆ.ಎಮ್ ನ್ಯಾಯಾಲಯದ ನ್ಯಾಯಾಧೀಶರಾದ ಅಲ್ಲಪ್ಪ ಎಮ್.ಬಡಿಗೇರ, ಇವರು ಸಾಕ್ಷಿ ವಿಚಾರಣೆ ಮಾಡಿ, ಆರೋಪಿಯನ್ನು ತಪ್ಪಿತಸ್ಥನೆಂದು ಪರಿಗಣಿಸಿ, ಆತನಿಗೆ 15 ತಿಂಗಳು ಸಾದಾ ಜೈಲು ಶಿಕ್ಷೆ ಮತ್ತು ರೂ. 5,000ಗಳ ದಂಡ ವಿಧಿಸಿ ತೀರ್ಪು ನೀಡಿರುತ್ತಾರೆ.

ವಿದ್ಯಾಗಿರಿ ಪೊಲೀಸ್ ಠಾಣೆಯ ಅಂದಿನ ಅಸಿಸ್ಟಂಟ್ ಸಬ್ ಇನ್ಸಪೆಕ್ಟರ್ ಆಗಿದ್ದ ರಾಜೇಸಾಬ ಎಸ್.ಕೆರೂರ್ ತನಿಖೆ ಮಾಡಿ, ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಸರಕಾರದ ಪರವಾಗಿ ಹಿರಿಯ ಸಹಾಯಕ ಸರಕಾರಿ ವಕೀಲರಾದ (ಸೀನಿಯರ್ ಎ.ಪಿ.ಪಿ) ಅನಿಲಕುಮಾರ. ರಮೇಶಚಂದ್ರ ತೊರವಿ ಸರಕಾರದ ಪರವಾಗಿ ವಕಾಲತ್ತು ಮಂಡಿಸಿದ್ದರು.

### ಶ್ರೀಕ್ಷೇತ್ರ ಜಗದ್ಗುರು ವರವಿ ಮೌನೇಶ್ವರರ ಜಾತ್ರಾಮಹೋತ್ಸವದ ಪೂರ್ವಭಾವಿ ಸಭೆ

# ವಿಜೃಂಭಣೆಯಿಂದ ಜಾತ್ರಾಮಹೋತ್ಸವ ಯಶಸ್ವಿಗೊಳಿಸೋಣ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನಾದ್ಯಂತ ಅಪಾರ ಭಕ್ತರನ್ನು ಹೊಂದಿರುವ ಮಹಿಮಾ ಪುರುಷರಾದ ಶ್ರೀಕ್ಷೇತ್ರ ವರವಿಯ ಜಗದ್ಗುರು ಮೌನೇಶ್ವರರ ಜಾತ್ರಾಮಹೋತ್ಸವವನ್ನು ವರವಿ ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್, ನಾಡಿನ ಸಮಸ್ತ ವಿಶ್ವಕರ್ಮ ಸಮಾಜ ಬಾಂಧವರು, ಮೌನೇಶ್ವ ಸ್ವಾಮಿಗಳು, ವರವಿ ಗ್ರಾಮದ ಸಮಸ್ತ ಹಿರಿಯರು, ಹಾಗೂ ಗದಗ ಜಿಲ್ಲೆಯ ಸರ್ವ ಸಮಾಜ ಬಾಂಧವರು ಸೇರಿ ಅತ್ಯಂತ ವಿಜೃಂಭಣೆಯಿಂದ, ಅರ್ಥಪೂರ್ಣವಾಗಿ ಆಚರಿಸೋಣ ಎಂದು ಟ್ರಸ್ಟ್ ಅಧ್ಯಕ್ಷ ಮೋಹನ್ ಸಿದ್ಧಪ್ಪ ನರಗುಂದ ಹೇಳಿದರು.

ಅವರು ಬುಧವಾರ ಶ್ರೀಕ್ಷೇತ್ರ ವರವಿ ಮೌನೇಶ್ವರ ದೇವಸ್ಥಾನದ ಸಭಾಮಂಟಪದಲ್ಲಿ ಆಯೋಜಿಸಿದ್ದ ಜಾತ್ರಾಮಹೋತ್ಸವ ಸಲಹಾ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಜಾತ್ರಾಮಹೋತ್ಸವದ ಅಂಗವಾಗಿ ವಿವಿಧ ಸಮಿತಿಗಳನ್ನು ರಚಿಸಲಾಗುವುದು. ಪ್ರತಿಯೊಂದು ಸಮಿತಿಯಲ್ಲಿ ಪಾಲ್ಗೊಂಡವರು ಸಮರ್ಥವಾಗಿ ಸಮಿತಿಯ ಕಾರ್ಯಗಳನ್ನು ನಿರ್ವಹಿಸುವ ಮೂಲಕ ಮೌನೇಶ್ವರ ಸೇವೆಯನ್ನು ನಾವೆಲ್ಲ ಭಕ್ತಿ, ಶ್ರದ್ಧೆಯಿಂದ ನಿರ್ವಹಿಸೋಣ. ಕ್ಷೇತ್ರದ ಅಭಿವೃದ್ಧಿಗಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅವರು ಸರ್ಕಾರದಿಂದ ಒಂದು ಕೋಟಿ ರೂ ಅನುದಾನ ಮಂಜೂರು ಮಾಡಿಸುವ ಭರವಸೆ ನೀಡಿದ್ದಾರೆ. ಆ ಹಣವನ್ನು ಸಭಾಮಂಟಪ ಕಾಮಗಾರಿಗೆ ವಿನಿಯೋಗಿಸಲಾಗುವುದು ಎಂದರು.

ಪದಾಧಿಕಾರಿ ಚಂದ್ರಶೇಖರ ಸೋನಾರ ಮಾತನಾಡಿ, ಜಾತ್ರೆಯ ಸಮಯದಲ್ಲಿ ಯಾವುದೇ ನ್ಯೂನ್ಯತೆಗಳಾಗದಂತೆ ನೋಡಿಕೊಳ್ಳೋಣ. ಒಟ್ಟಾರೆ ಸಮಾಜದ ಸರ್ವರೂ ಸೇರಿ ಈ ಬಾರಿಯ ಜಾತ್ರಾಮಹೋತ್ಸವವನ್ನು ಸಂಭ್ರಮದಿಂದ ಆಚರಿಸೋಣ ಎಂದು ತಿಳಿಸಿದರು.

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಕೊಪ್ಪ ಮಾತನಾಡಿ, ಜಾತ್ರಾಮಹೋತ್ಸವದ ಜೊತೆಗೆ ನಿರ್ಮಾಣ ಹಂತದಲ್ಲಿರುವ ಸಭಾಮಂಟಪವನ್ನು ಪೂರ್ಣಗೊಳಿಸಲು ಎಲ್ಲರೂ ಕೈಜೋಡಿಸೋಣ ಎಂದರು.

ಗದಗ ಜಿಲ್ಲಾ ವಿಶ್ವಕರ್ಮ ಮಹಾಸಭಾ ಅಧ್ಯಕ್ಷರಾದ ದೇವೆಂದ್ರಪ್ಪ ಬಡಿಗೇರ, ವಿಶ್ವಕರ್ಮ ಸಮಾಜದ ಗಣ್ಯರಾದ ವೀರಣ್ಣ ಸೊಲ್ಲಾಪೂರ, ಮೌನೇಶ ಹರಪನಹಳ್ಳಿ, ರುದ್ರಪ್ಪ ಬಡಿಗೇರ, ಮುತ್ತಣ್ಣ ಬಡಿಗೇರ, ರಮೇಶ ಬಡಿಗೇರ ಸೇರಿದಂತೆ ಅನೇಕ ಮುಖಂಡರು ಜಾತ್ರಾಮಹೋತ್ಸವ ಯಶಸ್ವಿಗೆ ಸಲಹೆ ಸೂಚನೆ ನೀಡಿದರು.

ಸಭೆಯಲ್ಲಿ ಶ್ರೀ ಸೋಮಲಿಂಗಯ್ಯಸ್ವಾಮಿ ಒಡೆಯರ ಸ್ವಾಮೀಜಿ, ವರವಿ ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಾರ್ಯದರ್ಶಿ ಮಹೇಶ ಸೋಮಣ್ಣ ಹುಲಬಜಾರ, ಹೂವಪ್ಪ ಸೊರಟೂರ, ವಿಠ್ಠಲ ಸವದಿ, ಮೌನೇಶ್ವರ ಅಕ್ಕಸಾಲಿ, ಕೆ. ಮನೋಹರ, ಶ್ರೀಧರ ಕೊಣ್ಣೂರ, ಮೌನೇಶ ಚಿ. ಬಡಿಗೇರ(ನರೇಗಲ್ಲ), ವೀರಣ್ಣ ಸೊಲ್ಲಾಪೂರ, ಮಹೇಶ ಕಮ್ಮಾರ, ನಾಗರಾಜ ಕಮ್ಮಾರ, ವೀರಣ್ಣ ಹಲವಾಗಲಿ, ನಾರಾಯಣಪ್ಪ ವಡ್ಡಟ್ಟಿ, ಮೌನೇಶ ಕಾ. ಹೊಸಮನಿ, ಮೌನೇಶ ರಟ್ಟಿಹಳ್ಳಿ, ಸೋಮಣ್ಣ ಕುಂದಣಗಾರ ಸೇರಿದಂತೆ ವಿವಿಧ ಜಿಲ್ಲೆಗಳ ವಿಶ್ವಕರ್ಮ ಸಮಾಜ ಬಾಂಧವರು ಪಾಲ್ಗೊಂಡಿದ್ದರು.

ಶಿಕ್ಷಕ ಎಸ್.ಎನ್. ಬಡಿಗೇರ ಪ್ರಾರ್ಥಿಸಿದರು. ಪದಾಧಿಕಾರಿಗಳಾದ ಕೊಟ್ರೇಶ ಆಚಾರ್ಯ ಸ್ವಾಗತಿಸಿದರು. ಚಂದ್ರಕಾಂತ ಸೋನಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿಶ್ವಕರ್ಮ ಸಮಾಜದ ಮುಖಂಡ ವಿಶ್ವನಾಥ ಯ.ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

# ಯುವ ಚೈತನ್ಯ: ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಯುವ ಚೈತನ್ಯ ಕಾರ್ಯಕ್ರಮದಡಿ ಅರ್ಹ ಯುವ ಸಂಘಗಳಿಗೆ ಕ್ರೀಡಾ ಕಿಟ್ ವಿತರಣೆ ಮಾಡಲು ಯುವ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2025-26ನೇ ಸಾಲಿನ ಯುವ ಚೈತನ್ಯ ಕಾರ್ಯಕ್ರಮದಡಿ ಅರ್ಹ ಯುವ ಸಂಘಗಳಿಗೆ ಕ್ರೀಡಾ ಕಿಟ್ ವಿತರಣೆ ಮಾಡಲು ಅರ್ಹ ಯುವ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳು ಇಲಾಖೆಯಲ್ಲಿ ಲಭ್ಯವಿದ್ದು, ಆಸಕ್ತ ಯುವ ಸಂಘಗಳು ದಿ:20-07-2025 ರೊಳಗಾಗಿ, ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿ ಅರ್ಜಿ ಸಲ್ಲಿಸಲು ಕೋರಲಾಗಿದೆ.

**ಷರತ್ತುಗಳು:** ಯುವ ಸಂಘವು ಕನಿಷ್ಠ 25 ಯುವ ಜನರನ್ನು ಸದಸ್ಯರನ್ನಾಗಿ ಹೊಂದಿರಬೇಕು. ಎಲ್ಲಾ ಸದಸ್ಯರ ವಯೋಮಿತಿಯು 18 ರಿಂದ 35 ವರ್ಷದೊಳಗಿರಬೇಕು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಾನ್ಯತೆ ಪಡೆದಿರಬೇಕು. ಯುವ ಸಂಘಗಳು ಇಲಾಖೆಯಿಂದ ಮಾನ್ಯತೆ ಪಡೆಯಲು ಸಂಘಗಳ ನೋಂದಣಿ ಕಾಯ್ದೆಯಡಿ ನೋಂದಣಿ ಕಡ್ಡಾಯವಾಗಿರುವುದಿಲ್ಲ. ಯುವ ಸಂಘವು ಕಡ್ಡಾಯವಾಗಿ ಕ್ರಿಯಾಶೀಲವಾಗಿರಬೇಕು. ನೋಂದಣಿ ಪ್ರಮಾಣ ಪತ್ರವು ಸೇವಾ ಸಿಂಧು ಮೂಲಕ ನವೀಕರಣಗೊಂಡಿರಬೇಕು. ಒಂದು ವರ್ಷದ ಒಳಗಿನ ಅವಧಿಯಲ್ಲಿ ಯುವ ಸಂಘಗಳು ಆಯೋಜಿಸಿದ ಕಾರ್ಯಕ್ರಮಗಳ ಫೋಟೋ, ಪತ್ರಿಕಾ ಜಾಹೀರಾತು ತುಣುಕು ಸೇರಿದಂತೆ ದಾಖಲೆ ಲಗತ್ತಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ದೂರವಾಣಿ ಸಂಖ್ಯೆ :08372-238345 ಗೆ ಸಂಪರ್ಕಿಸಲು ಕೋರಲಾಗಿದೆ.

### ಬಿಜೆಪಿ ಸದಸ್ಯರ ವಾರ್ಡುಗಳಿಗೆ ಪುರಸಭೆಯಿಂದ ಅನ್ಯಾಯ, ತಾರತಮ್ಯದ ಆರೋಪ

# ಬಿಜೆಪಿಯ 7 ಸದಸ್ಯರಿಂದ ಸಭಾತ್ಯಾಗ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರದಿಂದ ಮಂಜೂರಾದ ಅನುದಾನದಲ್ಲಿ ಕಾಮಗಾರಿಗಳ ಕ್ರಿಯಾಯೋಜನೆಗಳಿಗೆ ಅನುಮೋದನೆ ನೀಡುವ ವಿಷಯವಾಗಿ ನಡೆದ ಚರ್ಚೆಯಲ್ಲಿ ಬಿಜೆಪಿ ಸದಸ್ಯರ ವಾರ್ಡುಗಳಿಗೆ ಅನ್ಯಾಯ, ತಾರತಮ್ಯವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಬಿಜೆಪಿಯ 7 ಸದಸ್ಯರು ಸಭೆಯಿಂದ ಹೊರ ನಡೆದ ಘಟನೆ ಲಕ್ಷ್ಮೇಶ್ವರ ಪುರಸಭೆಯಲ್ಲಿ ಜರುಗಿತು.



ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಗುರುವಾರ ಪುರಸಭೆ ಆಡಳಿತ ಮಂಡಳಿಯ ವಿಶೇಷ ಸಾಮಾನ್ಯ ಸಭೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಅವರ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆ ಪ್ರಾರಂಭದಲ್ಲಿ ಪುರಸಭೆಗೆ ನೂತನ ಮುಖ್ಯಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಮಾಂತೇಶ ಬೀಳಗಿ ಅವರನ್ನು ಸ್ವಾಗತಿಸಿದರು. ಈ ವೇಳೆ ಹಿರಿಯ ಸದಸ್ಯರಾದ ರಾಜೀವ ಕುಂಬಿ, ಮಹೇಶ ಹೊಗೆಸೊಪ್ಪಿನ, ಅಶ್ವಿನಿ ಅಂಕಲಕೋಟಿ, ಪ್ರವೀಣ ಬಾಳಿಕಾಯಿ ಮಾತನಾಡಿ, ಜಿಲ್ಲೆಯಲ್ಲಿ ಲಕ್ಷ್ಮೇಶ್ವರ ಪಟ್ಟಣ ತೀವ್ರಗತಿಯಲ್ಲಿ ಬೆಳೆಯುತ್ತಿದ್ದು, ತಕ್ಕಂತೆ ಅಭಿವೃದ್ಧಿ ಕಾರ್ಯ ಮಾಡುವುದು ಮುಖ್ಯವಾಗಿದೆ. ಇದರಿಂದ ಮುಖ್ಯಾಧಿಕಾರಿಗಳಾದವರು ಪಟ್ಟಣದಲ್ಲಿಯೇ ವಾಸಿಸಬೇಕು ಎಂದರು.

ಇದಕ್ಕೆ ಮಹಾಂತೇಶ ಬೀಳಗಿ ಅವರು ಎಲ್ಲರ ಸಹಕಾರದಿಂದ ಪಟ್ಟಣದ ಅಭಿವೃದ್ಧಿಗೆ ಕಾರ್ಯ ಮಾಡುತ್ತೇನೆ ಎಂದು ಹೇಳಿದರು.

ನಂತರ ವಿಷಯ ಪಟ್ಟಿಯನ್ವಯ 2025-26ನೇ ಸಾಲಿನ 15ನೇ ಹಣಕಾಸು ಯೋಜನೆ ಅಡಿಯಲ್ಲಿ ಸರಕಾರದಿಂದ ಮಂಜೂರಾದ 1.93 ಕೋಟಿ ರೂಗಳಲ್ಲಿ ನಿಯಮಾವಳಿಯಂತೆ ಕಾಮಗಾರಿಗಳ ಕ್ರೀಯಾಯೋಜನೆ ಅನುಮೋದನೆ ನೀಡುವ ಕುರಿತು ಚರ್ಚೆ ಪ್ರಾರಂಭವಾದಾಗ ಬಿಜೆಪಿ ಸದಸ್ಯೆ ಅಶ್ವಿನಿ ಅಂಕಲಕೋಟಿ, ವಾಣಿ ಹತ್ತಿ, ಪೂರ್ಣಿಮಾ ಪಾಟೀಲ, ಪೂಜಾ ಖರಾಟೆ, ಮಹಾದೇವಪ್ಪ ಅಣ್ಣಿಗೇರಿ, ಮಂಜುಳಾ ಗುಂಜಳ, ಶೋಭಾ ಮೆಣಸಿನಕಾಯಿ ಅವರು ಕ್ರಿಯಾಯೋಜನೆಯಲ್ಲಿ ತಮ್ಮ ವಾರ್ಡಿನಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಸೇರಿಸಬೇಕು ಎಂದರು. ಈ ವೇಳೆ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ನಡುವೆ ಮಾತಿನ ಚಕಮಕಿ ನಡೆಯಿತು. ಅಧ್ಯಕ್ಷರೂ ಸಹ ಆಡಳಿತ ಪಕ್ಷದ ಕ್ರಮವನ್ನು ಸಮರ್ಥಿಸಿಕೊಂಡರು.

ಬಿಜೆಪಿ ಸದಸ್ಯರ ಗಮನಕ್ಕೆ ತರದೆ ಸಭೆಯಲ್ಲಿ ಅನುಮೋದನೆಗಾಗಿ ಪೂರ್ವ ನಿರ್ಧರಿತವಾದ ವಿಷಯ ಇಟ್ಟುಕೊಂಡಿರುವದು ಯಾವ ಕಾರಣಕ್ಕೆ, 23 ವಾರ್ಡ್‌ಗಳ ಅಭಿವೃದ್ಧಿಗೂ ಸರ್ಕಾರದ ಅನುದಾನ ಸಮಾನವಾಗಿ ಹಂಚಿಕೆ ಮಾಡದೆ ಆಡಳಿತ ಪಕ್ಷದ ಸದಸ್ಯರ ವಾರ್ಡ್‌ಗಳಿಗೆ ಮಾತ್ರ ಪ್ರಾಧಾನ್ಯತೆ ನೀಡಿರುವುದು ಯಾವ ನ್ಯಾಯ? ಈ ಸಭೆ ಏಕಪಕ್ಷೀಯವಾಗಿ ನಡೆಯುತ್ತಿದೆ ಎಂದು ಅಸಮಾಧಾನ ಹೊರಹಾಕಿದರು. ಈ ವೇಳೆ ಕಾಂಗ್ರೆಸ್ ಸದಸ್ಯ ಕ್ರಿಯಾಯೋಜನೆಗೆ ಅನುಮೋದನೆ ನೀಡಿರುವ ಬಹುಮತದ ಕಾಂಗ್ರೆಸ್ ಸದಸ್ಯರು ಸಹಿ ಮಾಡಿದ ಪತ್ರವನ್ನು ಸಭೆಗೆ ಸಲ್ಲಿಸಿದರು. ಇದರಿಂದ ಮತ್ತಷ್ಟು ಕೆರಳಿದ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದರು. ಈ ವೇಳೆ ರಾಮಪ್ಪ ಗಡದವರ ಕಲಾಂ ನಗರದಲ್ಲಿ 10 ವರ್ಷದ ಹಿಂದೆಯೇ ನಿರ್ಮಿಸಿದ ಜಲಾಗಾರಕ್ಕೆ ಮತ್ತು ಪ್ರವೀಣ ಬಾಳಿಕಾಯಿ ಅವರು ಮುಕ್ತಿಮಂದಿರ ರಸ್ತೆಯಲ್ಲಿ ನಿರ್ಮಿಸಿದ ಜಲಾಗಾರಕ್ಕೆ ಪೈಪ್‌ಲೈನ್ ಅಳವಡಿಕೆ ಸೇರಿ ನೀರು ಸರಬರಾಜಿಗೆ ಅಗತ್ಯದ ಕಾಮಗ್ಗಾಳಿಗೆ ಅನುಮೋದನೆ ಪಡೆದುಕೊಂಡರು.

ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಮುಖ್ಯಾಧಿಕಾರಿ ಮಾಂತೇಶ ಬೀಳಗಿ, ಕಿರಿಯ ಅಭಿಯಂತರ ವಿರೇಂದ್ರಸಿಂಗ್ ಕಾಟೇವಾಲೆ, ಮಂಜುಳಾ ಹೂಗಾರ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು, ನಾಮನಿರ್ದೇಶಿತ ಸದಸ್ಯರು ಹಾಜರಿದ್ದರು. ಹನುಮಂತ ನಂದೆಣ್ಣವರ ನಿರೂಪಿಸಿದರು.

ವಿರೋಧ ಪಕ್ಷದ ಸದಸ್ಯರ ಸಭಾತ್ಯಾಗದ ನಡುವೆಯೂ ಮೊದಲೇ ನಿರ್ಧರಿಸಿದಂತೆ 1.93 ಕೋಟಿ ರೂಗಳ ಅನುದಾನದಲ್ಲಿ 57.90 ಲಕ್ಷ ರೂಗಳ ವೆಚ್ಚದಲ್ಲಿ ಕುಡಿಯುವ ನೀರು, 77.20 ಲಕ್ಷ ರೂಗಳ ಮುಕ್ತನಿಧಿಯಲ್ಲಿ ರಸ್ತೆ ಚರಂಡಿ ಇತ್ಯಾದಿಗಳ ದುರಸ್ತಿ, ಹಾಗೂ ಘನತ್ಯಾಜ್ಯ ನಿರ್ವಹಣೆಗಾಗಿ 58.60 ಲಕ್ಷ ರೂಗಳನ್ನು ವಿನಿಯೋಗಿಸುವ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಯಿತು.

### ಸಿಂಗಟಾಲೂರು ಏತ ನೀರಾವರಿ ಯೋಜನಾ ಪ್ರದೇಶ: ಬಳಕೆದಾರರ ಕಾರ್ಯಾಗಾರ

# ಏಕಬೆಳೆ ಪದ್ಧತಿಯಿಂದ ಇಳುವರಿ ಕುಂಠಿತ

■ ವಿಜಯಸಾಕ್ಷಿ ಸುದ್ದಿ, ಗದಗ

ಏಕಬೆಳೆ ಪದ್ಧತಿಯನ್ನು ಅಳವಡಿಸಿಕೊಳ್ಳುವುದರಿಂದ ಭೂಮಿಯ ಫಲವತ್ತತೆ ಕುಂಠಿತಗೊಂಡು, ಬರುಬರುತ್ತಾ ಇಳುವರಿ ಕಡಿಮೆಯಾಗುತ್ತದೆ. ದ್ವಿದಳ ಧಾನ್ಯಗಳಾದ ತೊಗರಿ, ಕಡಲೆ ಮತ್ತು ಇನ್ನಿತರ ಬೆಳೆಗಳನ್ನು ಬೆಳೆಯುವುದರಿಂದ ವಾತಾವರಣದಲ್ಲಿರುವ ಸಾರಜನಕವು ದ್ವಿದಳ ಧಾನ್ಯಗಳ ಬೇರಿನಲ್ಲಿರುವ ರೈಜೋಬಿಯಂ ಗಂಟುಗಳ ಮುಖಾಂತರ ಸ್ಥಿರೀಕರಣಗೊಂಡು ಮಣ್ಣಿನ ಫಲವತ್ತತೆ ಹೆಚ್ಚಾಗಿ, ಮಣ್ಣಿನ ಭೌತಿಕ ಮತ್ತು ಜೈವಿಕ ಗುಣಧರ್ಮಗಳು ಉತ್ತಮವಾಗುವುದರೊಂದಿಗೆ ಸಾವಯವ ಇಂಗಾಲದ ಮಟ್ಟವು ಸುಧಾರಿಸುತ್ತದೆ ಎಂದು ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆಯ (ವಾಲ್ಮಿ) ನಿರ್ದೇಶಕರಾದ ಡಾ. ಗಿರೀಶ ಎನ್.ಮರಡ್ಡಿ ಹೇಳಿದರು.



ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ) ಧಾರವಾಡ ಮತ್ತು ಆರ್ಬಿಯಾ (ನೆಟಾಫಿಮ್) ಸಂಸ್ಥೆ ಇವರ ಸಹಯೋಗದಲ್ಲಿ ಗದುಗಿನ ಕೃಷಿ ವಿಸ್ತರಣಾ ಕೇಂದ್ರದಲ್ಲಿ ಸಿಂಗಟಾಲೂರು ಏತ ನೀರಾವರಿ ಯೋಜನಾ ಪ್ರದೇಶದ ನೀರು ಬಳಕೆದಾರರ ಸಹಕಾರ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ರೈತರಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೃಷಿ ವಿಸ್ತರಣಾ ಕೇಂದ್ರದ ಮುಖ್ಯಸ್ಥ ಡಾ. ಎಸ್.ಎಲ್. ಪಾಟೀಲ್, ಮಣ್ಣು ಪರೀಕ್ಷೆಯ ಮಹತ್ವದ ಬಗ್ಗೆ ತಿಳಿಸಿ, ಎರಡು ವರ್ಷಕ್ಕೆ ಒಮ್ಮೆಯಾದರೂ ಕಡ್ಡಾಯವಾಗಿ ಮಣ್ಣು ಪರೀಕ್ಷೆ ಮಾಡಿಸಿ, ಅದರ ಆಧಾರದ ಮೇಲೆ ಬೆಳೆಗಳಿಗೆ ಪೋಷಕಾಂಶಗಳನ್ನು ಒದಗಿಸಬೇಕೆಂದು ಕಿವಿಮಾತು ಹೇಳಿದರು. ವಾಲ್ಮಿ ಸಂಸ್ಥೆಯ ಸಮಾಲೋಚಕ ಸುರೇಶ ಕುಲಕರ್ಣಿ ಮಾತನಾಡಿ, ನೀರಾವರಿ ಕಾಯ್ದೆ ಹಾಗೂ ಸಹಕಾರ ಸಂಘಗಳ ಕಾಯ್ದೆಯಡಿಯಲ್ಲಿ ರಚಿಸಿಕೊಂಡಿರುವ ನೀರು ಬಳಕೆದಾರರ ಸಹಕಾರಿ ಸಂಘಗಳನ್ನು ಬಲವರ್ಧನೆಗೊಳಿಸಬೇಕು ಎಂದು ತಿಳಿಸಿದರು.

ಆರ್ಬಿಯಾ (ನೆಟಾಫಿಮ್) ಸಂಸ್ಥೆಯ ಸಹಾಯಕ ಮಹಾಪ್ರಬಂಧಕ ಗಿರೀಶ್ ದೇಶಪಾಂಡೆ ಮಾತನಾಡುತ್ತಾ, ಸಿಂಗಟಾಲೂರು ಏತ ನೀರಾವರಿ ಯೋಜನೆಯ ಅನುಷ್ಠಾನದ ಕುರಿತು ಸವಿಸ್ತಾರವಾದ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಾಲ್ಮಿ ಸಂಸ್ಥೆಯ ಸಮಾಲೋಚಕ ರಾಘವೇಂದ್ರ ತೆಗ್ಗಿ ಪಾಲ್ಗೊಂಡಿದ್ದರು. ವಾಲ್ಮಿ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕ ನಾಗರಾಜ ತಹಸೀಲ್ದಾರ್ ಸ್ವಾಗತಿಸಿ, ವಂದಿಸಿದರು.

# ಮಾದಕ ವಸ್ತುಗಳ ತಡೆಗೆ ಜಾಗೃತಿ ಅಗತ್ಯ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಾದಕ ವಸ್ತುಗಳಿಂದ ಯುವ ಪೀಳಿಗೆ ತಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದು, ಯುವ ಪೀಳಿಗೆಯಲ್ಲಿ ಮಾದಕ ವಸ್ತುಗಳ ಬಳಿಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಹಾಗೂ ಮಾದಕ ದ್ರವ್ಯ ವ್ಯಸನದಿಂದ ಮುಕ್ತಗೊಳಿಸುವಲ್ಲಿ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಯುವಕರಲ್ಲಿ ಜಾಗೃತಿ ಮುಖ್ಯವಾಗಿದೆ ಎಂದು ಮುಳಗುಂದ ಠಾಣಾ ಸಿಪಿಐ ಸಂಗಮೇಶ ಶಿವಯೋಗಿ ಹೇಳಿದರು.

ಅವರು ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದಲ್ಲಿ ಗದಗ ಜಿಲ್ಲಾ ಪೊಲೀಸ್ ಇಲಾಖೆ, ಮುಳಗುಂದ ಪೊಲೀಸ್ ಠಾಣೆ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಯುವ ಪೀಳಿಗೆ ಜಾಗೃತಗೊಂಡಾಗ ಮಾತ್ರ ಮಾದಕ ವಸ್ತುಗಳ ಸೇವನೆ, ಮಾರಾಟಕ್ಕೆ ಕಡಿವಾಣ ಹಾಕಲು ಸಾಧ್ಯ. ಮಾದಕ ವಸ್ತುಗಳ ಕಡಿವಾಣಕ್ಕೆ ಪೊಲೀಸ್ ಇಲಾಖೆಯಿಂದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಪ್ರಾಚಾರ್ಯ ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ಎಂ.ಎಂ. ಅದರಗುಂಚಿ, ಪ್ರಕಾಶ ಮದ್ದಿನ, ಬಸವರಾಜ ಬಡ್ನಿ, ಮುಳಗುಂದ ಪೊಲೀಸ್ ಠಾಣಾ ಎಎಸ್‌ಐ ಬಿ.ಎಂ. ಕುರ್ತಕೋಟಿ, ಎಚ್.ಬಿ. ಗುಡ್ಡಣ್ಣವರ, ವಿ.ವಾಯ್. ಪೂಜಾರ, ನಾಗರಾಜ ಸೌಳಭಾವಿ, ಸಂತೋಷ ಹಿರೇಮಠ ಇದ್ದರು.

# ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ರೋಣ

ಖಾಸಗಿ ಶಿಕ್ಷಣ ಸಂಸ್ಥೆಗಳು ಇಲ್ಲಸಲ್ಲದ ಕಾರಣಗಳನ್ನು ಹೇಳಿ ವಿದ್ಯಾರ್ಥಿಗಳಿಂದ ಶುಲ್ಕದ ನೆಪದಲ್ಲಿ ಭಾರೀ ಪ್ರಮಾಣದ ಹಣ ಪಡೆಯುತ್ತಿದ್ದು, ಈ ಕೂಡಲೇ ಅಂತಹ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಗುರುವಾರ ರೋಣ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಸೂಡಿ ವೃತ್ತದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಮುಲ್ಲಾನ ಭಾವಿ, ಪೋತರಾಜನ ಕಟ್ಟೆ ಮೂಲಕ ತಹಸೀಲ್ದಾರ ಕಚೇರಿ ತಲುಪಿತು. ಈ ಸಂಧರ್ಭದಲ್ಲಿ ಮೂರು ವೃತ್ತಗಳಲ್ಲಿ ಪ್ರತಿಭಟನಾಕಾರರು ಮಾನವ ಸರಪಳಿ ನಿರ್ಮಿಸುವ ಮೂಲಕ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಆಕ್ರೋಶ ಹೊರಹಾಕಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರ ಮಾಡಿಕೊಂಡಿದ್ದು, ವಿದ್ಯಾರ್ಥಿಗಳ ಪಾಲಕರಿಂದ ವಿವಿಧ ರೀತಿಯ ಶೈಕ್ಷಣಿಕ ಚಟುವಟಿಕೆಗಳ ಹಣ ಪಾವತಿಸಬೇಕು ಎಂದು ಒತ್ತಡ ಹಾಕಿ ಹಣ ದೋಚುತ್ತಿದ್ದಾರೆ. ಈ ಎಲ್ಲ ವಿಷಯಗಳು ಅಧಿಕಾರಿಗಳಿಗೆ ತಿಳಿದಿದ್ದರೂ ಸಹ ಮೌನವಾಗಿರುವುದು ನಾಚಿಕೆ ತರುವ ಸಂಗತಿಯಾಗಿದೆ. ಈ ಕೂಡಲೇ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಪಡೆಯುವ ಶಾಲಾ ಫೀ ಬಗ್ಗೆ ನಾಮಫಲಕ ಹಾಕುವಂತೆ ಸೂಚಿಸಬೇಕು ಎಂದು ಆಗ್ರಹಿಸಿದರು.

ಪರಿಷತ್‌ನ ಪದಾಧಿಕಾರಿಗಳು, ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಸಾಹಿತಿ ಮಳಲಕೆರೆ ಗುರುಮೂರ್ತಿ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ



'ಸಿದ್ಧಲಿಂಗ' ನಾಮಾಂಕಿತದಲ್ಲಿ ಸಾವಿರಾರು ತ್ರಿಪದಿಗಳನ್ನು ರಚಿಸಿದ್ದ ಹಿರಿಯ ಸಾಹಿತಿ ಮಳಲಕೆರೆ ಗುರುಮೂರ್ತಿಯವರು ದಾವಣಗೆರೆಯಲ್ಲಿ ತಮ್ಮ 86ನೇ ವಯಸ್ಸಿನಲ್ಲಿ ಅಗಲಿರುವುದಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಹಳಗನ್ನಡ, ನಡುಗನ್ನಡ ಕಾವ್ಯಗಳಲ್ಲಿ ಅಪಾರ ಪಾಂಡಿತ್ಯ ಹೊಂದಿದ್ದ ಶ್ರೀಯುತರು ಅನೇಕ ಕೃತಿಗಳನ್ನು, ವಿಶೇಷವಾಗಿ ತ್ರಿಪದಿಗಳಲ್ಲಿ ಸಿದ್ಧಾಂತ ಶಿಖಾಮಣಿ ರಚಿಸಿದ್ದನ್ನು ಮರೆಯುವಂತಿಲ್ಲ. ಶ್ರೀ ರಂಭಾಪುರಿ ಪೀಠದೊಡನೆ ಆತ್ಮೀಯ ಸಂಪರ್ಕ ಹೊಂದಿದ್ದ ಶ್ರೀಯುತರಿಗೆ ಶ್ರೀ ಪೀಠದಿಂದ 'ತ್ರಿಪದಿ ಭೂಷಣ' ಪ್ರಶಸ್ತಿಯನ್ನು ಹಾಗೂ 2010ರಲ್ಲಿ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ 'ಸಾಹಿತ್ಯ ಸಿರಿ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ.

ಅತ್ಯಂತ ಸರಳ ಸಜ್ಜನಿಕೆ ರೂಢಿಸಿಕೊಂಡಿದ್ದ ಮಳಲಕೆರೆ ಗುರುಮೂರ್ತಿಯವರು ಸ್ನೇಹ ಜೀವಿಗಳಾಗಿದ್ದರು. ಅವರ ಅಗಲಿಕೆಯಿಂದ ಅಪರೂಪದ ಪ್ರತಿಭೆಯೊಂದನ್ನು ಕಳೆದುಕೊಂಡಂತಾಗಿದೆ. ಅಗಲಿದ ಅವರ ಪವಿತ್ರ ಆತ್ಮಕ್ಕೆ ದಯಾಘನನಾದ ಪರಮಾತ್ಮನು ಚಿರಶಾಂತಿಯನ್ನು ಅನುಗ್ರಹಿಸಲಿ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಇಂದು ಕೆಂಪೇಗೌಡ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿಯನ್ನು ಜೂನ್ 27 ರಂದು ಬೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು , ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ್ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರುಗಳಾದ ಸಿ.ಸಿ.ಪಾಟೀಲ, ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ , ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

# ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಅಕ್ರಮ ಸಾಗಾಟ ತಡೆಗಟ್ಟುವಲ್ಲಿ ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು, ಪೋಷಕರು ಸೇರಿದಂತೆ ಇಂದಿನ ಯುವಜನತೆಯ ಸಹಕಾರ ಅತ್ಯವಶ್ಯವಾಗಿದೆ ಎಂದು ಮುಖ್ಯಶಿಕ್ಷಕ ಎಸ್.ಎನ್. ಹೂಲಗೇರಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾದಕ ವಸ್ತು ಬಳಕೆ ಮತ್ತು ಅಕ್ರಮ ಸಾಗಾಟ ವಿರೋಧಿ ದಿನಾಚರಣೆ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.



ಭವಿಷ್ಯತ್ತಿನ ಉತ್ತಮ ಪ್ರಜೆಗಳಾಗಲು ಹಾಗೂ ಉತ್ತಮ ಸಮಾಜ ನಿರ್ಮಿಸಲು ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಗಮನ ವಹಿಸಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವ್ಯಸನಿಗಳಾಗಬಾರದು. ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನವನ್ನು ವಿಶ್ವ ಮಾದಕ ವಸ್ತು ಬಳಕೆ ವಿರೋಧಿ ದಿನ ಎಂದು ಕರೆಯಲಾಗುತ್ತದೆ. ಇದನ್ನು ಪ್ರತಿ ವರ್ಷ ಜೂನ್ 26ರಂದು ಆಚರಿಲಾಗುತ್ತದೆ. ಮಾದಕ ವಸ್ತುಗಳ ಮಾರಾಟ ಮತ್ತು ಅಕ್ರಮ ಸಾಗಾಟದಂತಹ ಪ್ರಕರಣಗಳು ಕಂಡು ಬಂದರೆ ತತ್‌ಕ್ಷಣ ಪೋಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದರು.

ಮಕ್ಕಳು ಮಾದಕ ವಸ್ತು ವಿರೋಧಿಸುವ ಭಿತ್ತಿಪತ್ರಗಳನ್ನು ಪ್ರದರ್ಶಿಸುವದರ ಜೊತೆಗೆ ಮಾದಕ ವಸ್ತು ವಿರೋಧಿಸುವ ಘೋಷ ವಾಕ್ಯಗಳೊಂದಿಗೆ ಜಾಥಾದಲ್ಲಿ ಪಾಲ್ಗೊಂಡಿದ್ದರು. ಎ.ಟಿ. ಮಳ್ಳಳ್ಳಿ, ಎಂ.ಎಸ್. ಅತ್ತಾರ, ಬಿ.ಡಿ. ಯರಗೊಪ್ಪ, ಕೆ.ಸಿ. ಜೋಗಿ, ಎಸ್.ಶಿವಮೂರ್ತಿ, ಎಸ್. ಸಂಶಿಹಿರೇಮಠ, ಎಸ್. ಎಫ್. ಧರ್ಮಾಯತ, ಆರ್.ಎಂ. ಗುಳಬಾಳ, ಜ್ಯೋತಿ ಪೂಜಾರ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ವಾರ್ಷಿಕ ಸಭೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕದ ವಾರ್ಷಿಕ ಸಭೆ ಗುರುವಾರ ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಜಿನ್ನಿಂಗ್ ಆವರಣದಲ್ಲಿ ಜರುಗಿತು.



ಅಧ್ಯಕ್ಷತೆ ವಹಿಸಿದ್ದ ಸಂಘದ ತಾಲೂಕು ಘಟಕದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಸಂಘದ ವತಿಯಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ. ಸಧ್ಯ ಪ್ರತಿ ತಿಂಗಳು ನಡೆಯುವ ಸಭೆಯಲ್ಲಿ ಹಿರಿಯ ನಾಗರಿಕರ ಜನ್ಮ ದಿನ ಆಚರಿಸಲಾಗುತ್ತಿದೆ. ಅದರೊಂದಿಗೆ ಕೇಂದ್ರ ಸರ್ಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಸಂಘದ ಎಲ್ಲ ಸದಸ್ಯರಿಗೆ ಮುಟ್ಟಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇವೆ. ಈಗಾಗಲೇ ಕೇಂದ್ರ ಸರ್ಕಾರದಿಂದ ಆಯುಷ್ಮಾನ್ ಯೋಜನೆ ಜಾರಿಯಾಗಿದ್ದು, ಈ ಯೋಜನೆಯಡಿ 5ಲಕ್ಷ ರೂಪಾಯಿಗಳವರೆಗೆ ಹಿರಿಯ ನಾಗರಿಕರಿಗೆ ಉಚಿತ ಚಿಕಿತ್ಸಾ ಸೌಲಭ್ಯ ದೊರೆಯುತ್ತಿದೆ. ಸಂಘದ ಎಲ್ಲ ಸದಸ್ಯರು ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷೆ ಶಕುಂತಲಾ ಅಳಗವಾಡಿ, ಉಪಾಧ್ಯಕ್ಷ ಚಂಬಣ್ಣ ಬಾಳಿಕಾಯಿ, ಗೌರವಾಧ್ಯಕ್ಷ ಎಸ್.ಪಿ. ಪಾಟೀಲ, ಕುಬೇರಪ್ಪ ಮಹಾಂತಶೆಟ್ಟರ, ಪಾರಮ್ಮ ಧರಣಿ, ಸಿ.ಎಸ್. ಕೋಟಿಮಠ, ಐ.ಎಸ್. ಮಡಿವಾಳರ, ಎಂ.ಎಸ್. ಖುದ್ದುಬಾಯಿ ಸೇರಿದಂತೆ ಮತ್ತಿತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka